# ಸಮಾಜ ಕಲ್ಯಾಣ ಇಲಾಖೆ

**ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ-2013 ರ ಪ್ರಕಾರ ದಿನಾಂಕ: 04-06-2019 ರಂದು ನಡೆದ ರಾಜ್ಯ ಅನುಸೂಚಿತ ಜಾತಿಗಳ/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಸಭೆಯ ನಡವಳಿಗಳು**

**ಸ್ಥಳ**: ಕೊಠಡಿ ಸಂಖ್ಯೆ:334, 3ನೇ ಮಹಡಿ, ಸಮ್ಮೇಳನ ಸಭಾಂಗಣ, ವಿಧಾನಸೌಧ, ಬೆಂಗಳೂರು

**ಸಭೆಗೆ ಹಾಜರಾದ ಸದಸ್ಯರುಗಳ ಮತ್ತು ಅಧಿಕಾರಿಗಳ ವಿವರ:-**

| | | |
|---|---|---|
| 1 | ಶ್ರೀ ಹೆಚ್.ಡಿ.ಕುಮಾರಸ್ವಾಮಿ,<br>ಸನ್ಮಾನ್ಯ ಮುಖ್ಯಮಂತ್ರಿಗಳು. | ಅಧ್ಯಕ್ಷರು |
| 2 | ಡಾ.ಜಿ.ಪರಮೇಶ್ವರ<br>ಮಾನ್ಯ ಉಪ ಮುಖ್ಯ ಮಂತ್ರಿಗಳು | ವಿಶೇಷ ಆಹ್ವಾನಿತರು |
| 3 | ಶ್ರೀ ಪ್ರಿಯಾಂಕ್ ಖರ್ಗೆ,<br>ಮಾನ್ಯ ಸಮಾಜ ಕಲ್ಯಾಣ ಸಚಿವರು. | ಉಪಾಧ್ಯಕ್ಷರು |
| 4 | ಶ್ರೀ. ಆರ್.ವಿ. ದೇಶಪಾಂಡೆ<br>ಮಾನ್ಯ ಕಂದಾಯ ಸಚಿವರು | ಪದನಿಮಿತ್ತ ಸದಸ್ಯರು |
| 5 | ಶ್ರೀ. ಹೆಚ್.ಡಿ. ರೇವಣ್ಣ,<br>ಮಾನ್ಯ ಲೋಕೋಪಯೋಗಿ ಸಚಿವರು | ವಿಶೇಷ ಆಹ್ವಾನಿತರು |
| 6 | ಶ್ರೀ ಹೆಚ್.ಕೆ. ಕುಮಾರಸ್ವಾಮಿ,<br>ಮಾನ್ಯ ವಿಧಾನಸಭಾ ಸದಸ್ಯರು. | ಸದಸ್ಯರು |
| 7 | ಶ್ರೀ ಡಾ|| ಕೆ.ಅನ್ನದಾನಿ,<br>ಮಾನ್ಯ ವಿಧಾನಸಭಾ ಸದಸ್ಯರು. | ಸದಸ್ಯರು |
| 8 | ಶ್ರೀ. ಧರ್ಮಸೇನ.ಆರ್<br>ಮಾನ್ಯ ವಿಧಾನ ಪರಿಷತ್ ಸದಸ್ಯರು. | ಸದಸ್ಯರು |
| 9 | ಶ್ರೀ. ಅನಿಲ್ ಚಿಕ್ಕಮಾದು<br>ಮಾನ್ಯ ವಿಧಾನ ಸಭಾ ಸದಸ್ಯರು | ಸದಸ್ಯರು |
| 10 | ಶ್ರೀ. ಟಿ.ಎಂ. ವಿಜಯ ಭಾಸ್ಕರ, ಭಾ.ಆ.ಸೇ<br>ಸರ್ಕಾರದ ಮುಖ್ಯ ಕಾರ್ಯದರ್ಶಿ | ಪದನಿಮಿತ್ತ ಸದಸ್ಯರು |
| 11 | ಶ್ರೀಮತಿ. ವಂದಿತಾ ಶರ್ಮ, ಭಾ.ಆ.ಸೇ<br>ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, | ಪದನಿಮಿತ್ತ ಸದಸ್ಯರು |
| 12 | ಶ್ರೀ. ಐ.ಎಸ್.ಎನ್. ಪ್ರಸಾದ್, ಭಾ.ಆ.ಸೇ<br>ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ. | ಪದನಿಮಿತ್ತ ಸದಸ್ಯರು |
| 13 | ಶ್ರೀಮತಿ. ಶಾಲಿನಿ ರಜನೀಶ್, ಭಾ.ಆ.ಸೇ<br>ಸರ್ಕಾರದ ಪ್ರಧಾನ ಕಾರ್ಯದರ್ಶಿ,<br>ಯೋಜನೆ, ಕಾರ್ಯಕ್ರಮಗಳ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ | ಪದನಿಮಿತ್ತ ಸದಸ್ಯರು |
| 14 | ಶ್ರೀ. ಜಿ. ಕುಮಾರ ನಾಯಕ್, ಭಾ.ಆ.ಸೇ<br>ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ. | ಪದನಿಮಿತ್ತ ಸದಸ್ಯ ಕಾರ್ಯದರ್ಶಿ |

| | | |
|---|---|---|
| 15 | ಡಾ: ಇ. ವೆಂಕಟಯ್ಯ, ಭಾ.ಆ.ಸೇ (ನಿ) | ನೋಡಲ್ ಏಜೆನ್ಸಿ ಸಲಹೆಗಾರರು. |
| 16 | ಉಪ ಯೋಜನೆಗಳನ್ನು ಅನುಷ್ಟಾನ ಮಾಡುತ್ತಿರುವ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರು | ವಿಶೇಷ ಆಹ್ವಾನಿತರು |

ಪ್ರಾರಂಭದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರು ರಾಜ್ಯ ಪರಿಷತ್ ಅಧ್ಯಕ್ಷರಾದ ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಉಪ ಮುಖ್ಯಮಂತ್ರಿಗಳು, ಉಪಾಧ್ಯಕ್ಷರಾದ ಮಾನ್ಯ ಸಮಾಜ ಕಲ್ಯಾಣ ಸಚಿವರು, ರಾಜ್ಯ ಪರಿಷತ್ತಿನ ಎಲ್ಲಾ ನಾಮನಿರ್ದೇಶಿತ ಮಾನ್ಯ ಸದಸ್ಯರುಗಳು, ವಿಶೇಷ ಆಹ್ವಾನಿತರಾದ ಮಾನ್ಯ ಲೋಕೋಪಯೋಗಿ ಸಚಿವರು ಹಾಗೂ ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು ಮತ್ತು ಸಭೆಗೆ ಹಾಜರಾದ ಎಲ್ಲಾ ಇಲಾಖಾ ಮುಖ್ಯಸ್ಥರು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು.

2018-19 ನೇ ಸಾಲಿನಲ್ಲಿ ಎಸ್‌ಸಿಎಸ್‌ಪಿ /ಟಿಎಸ್‌ಪಿ ಯಡಿ ಒದಗಿಸಲಾಗಿದ್ದ ರೂ.29723.00 ಕೋಟಿಗಳ ಅನುದಾನ ಪೈಕಿ ರೂ.28184.00 ಕೋಟಿ ವೆಚ್ಚ ಮಾಡಿದ್ದು, ಶೇ.95 ರಷ್ಟು ಆರ್ಥಿಕ ಪ್ರಗತಿ ಸಾಧಿಸಿರುವುದನ್ನು ಸಭೆಯ ಅವಗಾಹನೆಗೆ ಮಂಡಿಸಲಾಯಿತು.

ಪರಿಶಿಷ್ಟ ಜಾತಿ/ಪಂಗಡದವರ ಅಭಿವೃದ್ಧಿಗಾಗಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ರಡಿಯಲ್ಲಿ 2019-20 ನೇ ಸಾಲಿನಲ್ಲಿ ಒಟ್ಟು ರೂ.30444.99 ಕೋಟಿಗಳನ್ನು ಒದಗಿಸಲಾಗಿದೆ. (ಎಸ್.ಸಿ.ಎಸ್.ಪಿ- ರೂ.21603.00 ಕೋಟಿ ಮತ್ತು ಟಿ.ಎಸ್.ಪಿ- ರೂ.8842.00 ಕೋಟಿ)

2019-20 ನೇ ಸಾಲಿನ ಅನುದಾನಕ್ಕೆ ಅನುಗುಣವಾಗಿ ವಿವಿಧ ಇಲಾಖೆಗಳು ಸಲ್ಲಿಸಿರುವ ಕ್ರಿಯಾ ಯೋಜನೆಗಳನ್ನು ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯ ನೋಡಲ್ ಏಜೆನ್ಸಿ ಸಭೆಯಲ್ಲಿ ಪರಿಶೀಲಿಸಿ ನೋಡಲ್ ಏಜೆನ್ಸಿ ಶಿಫಾರಸ್ಸಿನೊಂದಿಗೆ ಕ್ರಿಯಾ ಯೋಜನೆಗಳನ್ನು ರಾಜ್ಯ ಪರಿಷತ್ತಿನ ಅನುಮೋದನೆಗಾಗಿ ಮಂಡಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ, ಪ್ರಧಾನ ಕಾರ್ಯದರ್ಶಿಗಳು ತಿಳಿಸಿದರು.

ಈ ಕೆಳಕಂಡ ಕೆಲವು ಇಲಾಖೆಗಳು ಶೇ.90 ಕ್ಕಿಂತ ಕಡಿಮೆ ಪ್ರಗತಿ ಸಾಧಿಸಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು.

| ಕ್ರ. ಸಂ | ಇಲಾಖೆ | SCSP | TSP | ಕ್ರ. ಸಂ | ಇಲಾಖೆ | SCSP | TSP |
|---|---|---|---|---|---|---|---|
| 1 | ತೋಟಗಾರಿಕೆ | 73% | 90% | 9 | ಲೋಕೋಪಯೋಗಿ | 71% | 75% |
| 2 | ಸಾರಿಗೆ | 87% | 90% | 10 | ಸಣ್ಣ ನೀರಾವರಿ | 98% | 85% |
| 3 | ಅರಣ್ಯ | 66% | 64% | 11 | ಕಾರ್ಮಿಕ | 75% | 75% |
| 4 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ | 80% | 72% | 12 | ಕೌಶಲ್ಯಾಭಿವೃದ್ಧಿ | 83% | 62% |
| 5 | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ | 69% | 59% | 13 | ಕನ್ನಡ ಮತ್ತು ಸಂಸ್ಕೃತಿ | 100% | 73% |
| 6 | ಯುವ ಸಬಲೀಕರಣ ಮತ್ತು ಕ್ರೀಡೆ | 67% | 57% | 14 | ಕಾನೂನು | 82% | 79% |
| 8 | ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ | 82% | 81% | 15 | ಸಹಕಾರ | 99% | 89% |

ನಂತರ ಮಾನ್ಯ ಮುಖ್ಯ ಮಂತ್ರಿಗಳ ಅನುಮತಿಯೊಂದಿಗೆ ಕ್ರಿಯಾ ಯೋಜನೆಗಳ ಬಗ್ಗೆ ವಿವರವಾಗಿ ಚರ್ಚಿಸಲು ಪ್ರಾರಂಭಿಸಲಾಯಿತು.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುಷ್ಠಾನದ ಬಗ್ಗೆ ಮಾನ್ಯ ಉಪಮುಖ್ಯಮಂತ್ರಿಗಳು ಮಾತನಾಡಿ 2013-14ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಗೆ ಸುಮಾರು ರೂ. 8616.00 ಕೋಟಿ ಅನುದಾನ ಒದಗಿಸಿದ್ದು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಧಿನಿಯಮ ಜಾರಿಗೆ ಬಂದ ನಂತರ ಪ್ರತಿ ವರ್ಷ ಆಯವ್ಯಯದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನಸಂಖ್ಯೆಗೆ ಅನುಗುಣವಾಗಿ ಶೇ.24.1 ರಷ್ಟು ಅನುದಾನ ಒದಗಿಸಲಾಗಿ ಪ್ರಸ್ತುತ 2019-20 ನೇ ಸಾಲಿನಲ್ಲಿ ಈ ಮೊತ್ತ ರೂ.30444.99 ಕೋಟಿಗಳಿಗೆ ಏರಿಕೆಯಾಗಿರುತ್ತದೆ. ಇದು ಸರ್ಕಾರದ ಒಳ್ಳೆಯ ನಿರ್ಣಯವಾಗಿರುತ್ತದೆ. ಆದರೆ ಎಸ್.ಸಿ.ಎಸ್.ಪಿ./ ಟಿ.ಎಸ್.ಪಿ. ಕಾರ್ಯಕ್ರಮಗಳ ಅನುಷ್ಠಾನದಿಂದ ಪ್ರಯೋಜನ ಪಡೆದು ಬಡತನ ರೇಖೆಯಿಂದ ಮೇಲೆ ಬಂದ ಈ ವರ್ಗದ ಕುಟುಂಬಗಳ ವಿವರಗಳನ್ನು ಆಯಾ ಇಲಾಖೆಗಳು ಮಾಹಿತಿ ಸಂಗ್ರಹಿಸಿ ಸಾರ್ವಜನಿಕರ ಮಾಹಿತಿಗಾಗಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದರು. ಈ ಯೋಜನೆಯಡಿ ಒದಗಿಸಿದ ಅನುದಾನವನ್ನು ಪರಿಶಿಷ್ಟ ಜಾತಿ/ಪಂಗಡದವರ ಶೈಕ್ಷಣಿಕ ಮತ್ತು ಆರ್ಥಿಕ ಅಭಿವೃದ್ಧಿಗಾಗಿ ಬಳಸಿಕೊಳ್ಳಲು ಸೂಚಿಸುತ್ತಾ ಸದರಿ ಅನುದಾನದ ಸಮರ್ಪಕ ಬಳಕೆಯ ಕುರಿತು ಮೌಲ್ಯಮಾಪನ ಮಾಡಲು ಸಹ ತಿಳಿಸಿದರು. ಈ ನಿಟ್ಟಿನಲ್ಲಿ ಸಮಾಜ ಕಲ್ಯಾಣ ಇಲಾಖೆಯು ಈಗಾಗಲೇ ಕ್ರಮಕೈಗೊಂಡಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರು ಸಭೆಯ ಗಮನಕ್ಕೆ ತಂದರು.

2019-20 ನೇ ಸಾಲಿನಲ್ಲಿ ರಾಜ್ಯ ಅಭಿವೃದ್ಧಿ ಪರಿಷತ್ತಿನ ಅನುಮೋದನೆಗಾಗಿ ಸಲ್ಲಿಸಿದ ಇಲಾಖಾವಾರು ಕ್ರಿಯಾ ಯೋಜನೆಗಳ ವಿವರವನ್ನು ಕೆಳಕಂಡಂತೆ ಸಭೆಯಲ್ಲಿ ಮಂಡಿಸಲಾಯಿತು.

1. **ಕೃಷಿ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ- ಎಸ್.ಸಿ.ಎಸ್.ಪಿ-ರೂ.574.71 ಕೋಟಿ, ಟಿ.ಎಸ್.ಪಿ- ರೂ.243.99 ಕೋಟಿ ಒಟ್ಟು ರೂ.818.70 ಕೋಟಿ. ಕೃಷಿ ಇಲಾಖೆಯ ಕುರಿತು ಚರ್ಚಿಸಿ ಹಿಂದಿನ ವರ್ಷ ಟ್ರಾಕ್ಟರ್ ವಿತರಣೆಗೆ ರೂ.3.00 ಲಕ್ಷ ಸಹಾಯಧನ ನೀಡಲು ನಿರ್ಣಯಿಸಿದ್ದರೂ ಅದನ್ನು ಜಾರಿಗೆ ತರದೆ ರೂ.2.00 ಲಕ್ಷ ಸಹಾಯಧನ ನೀಡಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು. ಈ ಕುರಿತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ತೀವ್ರ ಅಸಮಾಧಾನ ವ್ಯಕ್ತಪಡಿಸಲಾಯಿತು.

ಕೃಷಿ ಇಲಾಖೆಯ ಕಾರ್ಯದರ್ಶಿಗಳು ಮಾತನಾಡಿ 25 ಹೆಚ್.ಪಿ ಸಾಮರ್ಥ್ಯದ ಟ್ರಾಕ್ಟರ್‌ಗಳನ್ನು ನೀಡಲಾಗುತ್ತಿದ್ದು, ಅದಕ್ಕೆ ರೂ.2.00 ಲಕ್ಷ ಸಹಾಯಧನ ನೀಡಲಾಗಿದೆ ಮತ್ತು ಹೆಚ್ಚಿನ ಜನರಿಗೆ ಸೌಲಭ್ಯ ಕಲ್ಪಿಸಲು ಪವರ್ ಟಿಲ್ಲರ್‌ಗಳನ್ನು ನೀಡಲಾಗುತ್ತಿದೆ ಮತ್ತು ಕೆಲವು ಪ್ರಕರಣಗಳಲ್ಲಿ ಫಲಾನುಭವಿಗಳು ಸೌಲಭ್ಯಗಳನ್ನು ಅನಧಿಕೃತವಾಗಿ ಪರಭಾರೆ ಮಾಡುತ್ತಿರುವುದು ಗಮನಿಸಲಾಗಿದೆ ಎಂದು ತಿಳಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳು ಈ ಬಗ್ಗೆ ಪ್ರಸ್ತಾಪಿಸಿ ರಾಜ್ಯ ಪರಿಷತ್ತಿನ ನಿರ್ಣಯದಂತೆ ಎಲ್ಲಾ ಅಧಿಕಾರಿಗಳು ಕ್ರಮವಹಿಸಬೇಕಾಗಿದೆ ಮತ್ತು ಕೃಷಿ ಉಪಕರಣಗಳನ್ನು ಅನಧಿಕೃತವಾಗಿ ಪರಭಾರೆ ಮಾಡುವುದನ್ನು ತಡೆಹಿಡಿಯುವಂತೆ ಸೂಕ್ತ ಕ್ರಮವಹಿಸಲು ಸೂಚಿಸಿದರು. ಕೆಲವು ಪ್ರಕರಣಗಳಲ್ಲಿ ದುರುಪಯೋಗ ಆಗುತ್ತದೆ ಎಂದು ಭಾವಿಸಿ ಯೋಜನೆಗಳನ್ನು ಅನುಷ್ಠಾನಗೊಳಿಸದೇ ಇರುವುದು ಸರಿಯಲ್ಲ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮಾನ್ಯ ಕಂದಾಯ ಸಚಿವರು ಮಾತನಾಡಿ ಕೆಲವು ಕಡೆ ಸರ್ಕಾರಿ ಯೋಜನೆಗಳ ಸೌಲಭ್ಯ ಪಡೆದವರೆ ಪುನಃ ಸೌಲಭ್ಯಗಳನ್ನು ಪಡೆಯುತ್ತಿರುವುದು ಕಂಡು ಬಂದಿರುತ್ತದೆ. ಇದರಿಂದ ಕೆಲವೇ ಜನರು ಯೋಜನೆಗಳ ಸೌಲಭ್ಯ ಪಡೆಯುತ್ತಿರುವುದನ್ನು ತಡೆಗಟ್ಟಲು ಮತ್ತು ಯೋಜನೆಯ ಸೌಲಭ್ಯ ದೊರಕದ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ದೊರಕಿಸಿಕೊಡಲು ಕ್ರಮ ವಹಿಸುವಂತೆ ಸೂಚಿಸಿದರು.

2019-20 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ ಈ ಕೆಳಕಂಡ ಕಾರ್ಯಕ್ರಮಗಳನ್ನು ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗಿದೆ ಎಂದು ಸಭೆಯ ಅವಗಾಹನೆಗೆ ತರಲಾಯಿತು.

ಹೊಸ ಯೋಜನೆ :

- ರೈತ ಸಿರಿ ಯೋಜನೆಯಡಿ ಸಿರಿಧಾನ್ಯ ಬೆಳೆಗಾರರಿಗೆ ನಗದು ಪ್ರೋತ್ಸಾಹ
- ಕರಾವಳಿ ಪ್ಯಾಕೇಜ್ ಮೂಲಕ ಕರಾವಳಿ ಮತ್ತು ಮಲೆನಾಡಿನ ರೈತರಿಗೆ ಭತ್ತ ಬೆಳೆಯಲು ಪ್ರೋತ್ಸಾಹ
- ಕನಿಷ್ಠ ಬೆಂಬಲ ಆವರ್ತಕ ನಿಧಿ

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನ ಅನುಮೋದನೆ ನೀಡಲಾಗಿದೆ.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು
2. ಎಸ್.ಸಿ/ಎಸ್.ಟಿ ರೈತರಿಗೆ 25 ಹೆಚ್.ಪಿ ಸಾಮರ್ಥ್ಯದ ಟ್ರಾಕ್ಟರ್ ಗಳಿಗೆ ರೂ.3.00 ಲಕ್ಷ ಸಹಾಯಧನ ನೀಡುವುದು
3. ಮೇಲ್ಕಂಡ 3 ಹೊಸ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ)**

**2. ತೋಟಗಾರಿಕೆ ಇಲಾಖೆ:-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ -SCSP: Rs.133.53 crs. + TSP : Rs.53.14 crs. ಒಟ್ಟು ಮೊತ್ತ: ರೂ.186.67 ಕೋಟಿಗಳು.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರಿಗೆ ಹಿಂದಿನ ವರ್ಷ ಪಾಲಿ ಹೌಸ್ ನಿರ್ಮಾಣಕ್ಕಾಗಿ ಶೇ.90 ರಷ್ಟು ಗರಿಷ್ಠ ರೂ.25.00 ಲಕ್ಷ ಸಹಾಯಧನ ನೀಡಲು ನಿರ್ಣಯಿಸಲಾಯಿತು. ಈ ಯೋಜನೆ ಬಗ್ಗೆ 1 ಎಕರೆಗೆ ಪಾಲಿ ಹೌಸ್‌ಗಾಗಿ ಸುಮಾರು ರೂ.31.00 ಲಕ್ಷ ಬೇಕಾಗಿದ್ದು, ಆದ್ದರಿಂದ ಸಹಾಯಧನ ಹೊರತುಪಡಿಸಿ ಉಳಿದ ಹಣವನ್ನು ಭರಿಸಲು ಕಷ್ಟವಾಗುತ್ತಿರುವ ಹಿನ್ನೆಲೆಯಲ್ಲಿ ಗರಿಷ್ಠ ಮಿತಿಯನ್ನು ತೆಗೆದುಹಾಕಲು ಪ್ರಸ್ತಾಪಿಸಲಾಗಿದೆ. ಮಾನ್ಯ ಸದಸ್ಯರಾದ ಡಾ:ಕೆ.ಅನ್ನದಾನಿ ಇವರು ಮಾತನಾಡಿ ಪಾಲಿ ಹೌಸ್ ಗೆ ಹೆಚ್ಚಿನ ಬೇಡಿಕೆ ಇರುವುದರಿಂದ ಮತ್ತು ರೈತರಿಗೆ ಹೆಚ್ಚಿನ ಪ್ರಯೋಜನವಾಗುವುದರಿಂದ ಶೇ.90 ರಷ್ಟು ಸಹಾಯಧನ ನೀಡುವುದು ಸೂಕ್ತವೆಂದು ತಿಳಿಸಿದರು.

2019-20 ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಹೊಸದಾಗಿ ಪ.ಜಾತಿ/ಪ.ಪಂಗಡದ ರೈತರಿಗೆ ದಾಳಿಂಬೆ ಮತ್ತು ದ್ರಾಕ್ಷಿ ಬೆಳೆಯಲು ಪ್ರೋತ್ಸಾಹ ನೀಡಲು ಮತ್ತು ಕ್ರೈಸ್ ವಸತಿ ಶಾಲೆ

ಮತ್ತು ಇಲಾಖಾ ವಸತಿ ನಿಲಯಗಳಲ್ಲಿ ಹಣ್ಣಿನ ಗಿಡಗಳನ್ನು ಬೆಳೆಸಲು ಸೇರಿಸಲಾಗಿದೆ ಎಂದು ಸಭೆಯ ಗಮನಕ್ಕೆ ತರಲಾಯಿತು.

ತೋಟಗಾರಿಕೆ ಇಲಾಖೆಯ ಕುರಿತು ಚರ್ಚಿಸಿ ಈ ಕೆಳಕಂಡಂತೆ ರಾಜ್ಯ ಪರಿಷತ್ತಿನಲ್ಲಿ ತೀರ್ಮಾನಿಸಲಾಗಿದೆ.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸುವುದು
2. ಕೃಷಿಕರಿಗೆ ಪಾಲಿಹೌಸ್ ಸೌಲಭ್ಯ ಉತ್ತಮ ಯೋಜನೆ ಆಗಿರುವ ಕಾರಣ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರಿಗೆ 1 ಎಕರೆಗೆ ಸೀಮಿತಗೊಳಿಸಿ ಶೇ.90 ರಷ್ಟು ಸಹಾಯಧನ ನೀಡುವುದು
3. ಪ.ಜಾತಿ/ಪ.ಪಂಗಡದ ರೈತರಿಗೆ ದಾಳಿಂಬೆ ಮತ್ತು ದ್ರಾಕ್ಷಿ ಬೆಳೆಯಲು ಪ್ರೋತ್ಸಾಹ ನೀಡುವುದು
4. ಕ್ರೈಸ್ ವಸತಿ ಶಾಲೆ ಮತ್ತು ಇಲಾಖಾ ವಸತಿ ನಿಲಯಗಳಲ್ಲಿ ಹಣ್ಣಿನ ಗಿಡಗಳನ್ನು ಬೆಳೆಸುವುದು

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ)**

**3. ರೇಷ್ಮೆ ಇಲಾಖೆ:-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.16.92 crs. + TSP : Rs.8.28 crs. ಒಟ್ಟು ಮೊತ್ತ : ರೂ.25.20 ಕೋಟಿಗಳು.

ಈ ಇಲಾಖೆಯ ಕ್ರಿಯಾ ಯೋಜನೆಗಳನ್ನು ಪರಿಶೀಲಿಸಿ, ರೇಷ್ಮೆ ಅಭಿವೃದ್ಧಿಗಾಗಿ ಸಮಗ್ರ ಅಭಿವೃದ್ಧಿ ಯೋಜನೆಯನ್ನು ರೂಪಿಸಿ ಅನುಷ್ಟಾನಗೊಳಿಸಿದ್ದಲ್ಲಿ ರೇಷ್ಮೆ ಬೆಳೆಗಾರರಿಗೆ ಮತ್ತು ರೀಲರ್ಸ್‌ಗೆ ಅನುಕೂಲವಾಗುತ್ತದೆ ಎಂದು ಮಾನ್ಯ ಸಮಾಜ ಕಲ್ಯಾಣ ಸಚಿವರು ತಿಳಿಸಿದರು.

ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಕಾರ್ಯದರ್ಶಿ, ರೇಷ್ಮೆ ಇಲಾಖೆ)**

**4. ಪಶು ಸಂಗೋಪನೆ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP: Rs.162.50 crs. + TSP : Rs.91.59 crs. ಒಟ್ಟು ಮೊತ್ತ : ರೂ. 254.09 ಕೋಟಿಗಳು.

ಆಯವ್ಯಯದಲ್ಲಿ ಘೋಷಿಸಿದಂತೆ ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ ನೀಡಲಾಗುವ ಸಹಾಯಧನವನ್ನು ರೂ.5/- ರಿಂದ ರೂ.6/- ಕ್ಕೆ ಹೆಚ್ಚಿಸುವ ಬಗ್ಗೆ ಕ್ರಿಯಾಯೋಜನೆಯಲ್ಲಿ ಸೇರಿಸಲಾಗಿದೆ. ಆದರೆ, ಪ.ಜಾತಿ/ಪ.ಪಂಗಡದ ಹಾಲು ಉತ್ಪಾದಕರ ಸಂಖ್ಯೆಯನ್ನು ಸಂಗ್ರಹಿಸಿ ಸಮಾಜ ಕಲ್ಯಾಣ ಇಲಾಖೆಗೆ ನೀಡಲು ಕೋರಲಾಯಿತು. ಹೊಸದಾಗಿ ನಾಟಿ ಕೋಳಿ ಸಾಕಾಣಿಕೆಗೆ ರೂ.1000/- ಸಹಾಯಧನ ನೀಡಲು ಸಹ ಪ್ರಸ್ತಾಪಿಸಲಾಗಿದೆ.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸುವುದು

2. ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ ರೂ.6/- ರಂತೆ ಸಹಾಯಧನ ನೀಡುವುದು.

3. ನಾಟಿ ಕೋಳಿ ಸಾಕಾಣಿಕೆಗೆ ರೂ.1000/- ಸಹಾಯಧನ ನೀಡುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನೆ ಇಲಾಖೆ)**

**5. ಮೀನುಗಾರಿಕೆ ಇಲಾಖೆ:-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ- SCSP: Rs.3.64 crs. + TSP : Rs.1.07 crs. ಒಟ್ಟು ಮೊತ್ತ : ರೂ.4.71 ಕೋಟಿಗಳು.

ಕ್ರಿಯಾ ಯೋಜನೆಯನ್ನು ಪರಿಶೀಲಿಸಿ, ಮಾನ್ಯ ಉಪ ಮುಖ್ಯ ಮಂತ್ರಿಗಳು ಮೀನುಗಾರಿಕೆ ಇಲಾಖೆಯಲ್ಲಿ ಕಿಯೋಸ್ಕ್ ಮಾದರಿಯಲ್ಲಿ 4 ಚಕ್ರದ ಸಂಚಾರಿ ರಿಟೇಲ್ ಮೀನು ತಿಂಡಿಗಳ ಕ್ಯಾಂಟೀನ್/ತಾಜಾ ಮೀನು ಮಾರಾಟ ಮಳಿಗೆ ಸ್ಥಾಪಿಸಲು ಧನಸಹಾಯ ಪಡೆದವರ ವಿವರವನ್ನು ನೀಡಲು ಸೂಚಿಸಿದರು.

ಮೀನುಗಾರಿಕೆ ಇಲಾಖೆಯ ಕಾರ್ಯದರ್ಶಿಗಳು ಉತ್ತರಿಸಿ, ಮೀನುಗಾರಿಕೆ ಅಭಿವೃದ್ಧಿ ನಿಗಮದಿಂದ ಮೀನು ಮಾರಾಟದ ಮಳಿಗೆ ಸ್ಥಾಪಿಸಲು ಸಹಾಯಧನ ನೀಡಲಾಗಿದೆ. ಫಲಾನುಭವಿಗಳ ವಿವರಗಳನ್ನು ಸಲ್ಲಿಸಲಾಗುವುದೆಂದು ತಿಳಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಕಾರ್ಯದರ್ಶಿ, ಮೀನುಗಾರಿಕೆ ಇಲಾಖೆ)**

**6. ಸಾರಿಗೆ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP: Rs.178.28 crs. + TSP : Rs.87.12 crs. ಒಟ್ಟು ಮೊತ್ತ : ರೂ.265.40 ಕೋಟಿಗಳು

ಸಾರಿಗೆ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಮುಖ್ಯವಾಗಿ ಪ.ಜಾತಿ/ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಿಸುವ ಕಾರ್ಯಕ್ರಮ ಅನುಷ್ಠಾನಗೊಳಿಸುತ್ತಿದ್ದು, ಈ ಕಾರ್ಯಕ್ರಮಕ್ಕೆ ರೂ.186.00 ಕೋಟಿ ಅನುದಾನದ ಕೊರತೆಯಿರುತ್ತದೆ ಎಂದು ತಿಳಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳು ಮಾತನಾಡಿ ಬಸ್ ನಿಲ್ದಾಣ/ತಂಗುದಾಣ ನಿರ್ಮಾಣ ಕಾರ್ಯಕ್ರಮವು ಸಾಮಾನ್ಯ ಕಾರ್ಯಕ್ರಮವಾಗಿದ್ದು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ರಡಿ ವೆಚ್ಚ ಭರಿಸುವುದು ಸೂಕ್ತವಲ್ಲ. ಈ ಬಗ್ಗೆ ಪುನರ್ ಪರಿಶೀಲಿಸಲು ಸೂಚಿಸಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ಮಾತನಾಡಿ ನೋಡಲ್ ಏಜೆನ್ಸಿ ಸಭೆಗಳಲ್ಲಿ ಈ ಬಗ್ಗೆ ಸಾಕಷ್ಟು ಚರ್ಚೆಯಾಗಿದ್ದು, ಮುಂದುವರೆದ ಬಸ್ ನಿಲ್ದಾಣ ಕಟ್ಟಡ ಕಾಮಗಾರಿಗಳನ್ನು ಪೂರ್ಣಗೊಳಿಸಲು ಮಾತ್ರ ಅನುದಾನ ಬಳಸಬೇಕೆಂದು, ಹೊಸ ಕಾಮಗಾರಿಗಳನ್ನು ಯಾವುದೇ ಕಾರಣಕ್ಕೂ ತೆಗೆದುಕೊಳ್ಳಬಾರದೆಂದು ಈಗಾಗಲೇ ಸೂಚಿಸಲಾಗಿದೆ. ಮುಂದಿನ ಆರ್ಥಿಕ ವರ್ಷದಿಂದ ಇಂತಹ ಕಾರ್ಯಕ್ರಮಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ರಡಿ ಅನುದಾನ ಹಂಚಿಕೆ ಮಾಡತಕ್ಕದ್ದಲ್ಲವೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಡಾ: ಕೆ.ಅನ್ನದಾನಿ ಇವರು ಮೀಸಲು ಕ್ಷೇತ್ರಗಳಲ್ಲಿ ಬಸ್ ನಿಲ್ದಾಣ/ತಂಗುದಾಣ ನಿರ್ಮಾಣ ಮಾಡಿರುವ ಬಗ್ಗೆ ಮಾಹಿತಿ ಒದಗಿಸಲು ಕೋರಿದರು.

ಸಾರಿಗೆ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಬಂಡವಾಳ ಲೆಕ್ಕ ಶೀರ್ಷಿಕೆಗಳಲ್ಲಿ ಸುಮಾರು ರೂ.10.00 ಕೋಟಿ ಮಾತ್ರ ನೀಡಿದ್ದು, ಅದರಿಂದ ಮೀಸಲು ಕ್ಷೇತ್ರಗಳಲ್ಲಿ ಸಣ್ಣ ಪ್ರಮಾಣದ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದರು.

ಹೊಸ ಕಾರ್ಯಕ್ರಮಗಳಾದ ಆಟೋ ಮತ್ತು ವಾಹನ ಚಾಲಕರ ಕಲ್ಯಾಣ ಪ್ರಾಧಿಕಾರ ಹಾಗೂ ಆಟೋ ಮತ್ತು ವಾಹನ ಚಾಲಕರಿಗೆ ವಸತಿ ಯೋಜನೆಗಳಿಗೆ ಮಾರ್ಗಸೂಚಿಗಳು ಮತ್ತು ಸರ್ಕಾರಿ ಆದೇಶ ಹೊರಡಿಸುವ ಕುರಿತು ಚರ್ಚಿಸಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸುವುದು
2. ಹೊಸ ಕಾರ್ಯಕ್ರಮಗಳ ಅನುಷ್ಟಾನದ ಬಗ್ಗೆ ಸರ್ಕಾರಿ ಆದೇಶ ಹೊರಡಿಸುವ ಪೂರ್ವದಲ್ಲಿ ನೋಡಲ್ ಏಜೆನ್ಸಿಯ ಅವಗಾಹನೆಗೆ ತರಲು ಸೂಚಿಸಲಾಯಿತು

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಾರಿಗೆ ಇಲಾಖೆ/ಸಮಾಜ ಕಲ್ಯಾಣ ಇಲಾಖೆ/ಆರ್ಥಿಕ ಇಲಾಖೆ)**

### 7. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ:-

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ- SCSP : Rs. 1831.44 crs. + TSP : Rs.811.54 crs. ಒಟ್ಟು ಮೊತ್ತ : ರೂ.2642.98 ಕೋಟಿಗಳು.

ಮಾನ್ಯ ಉಪ ಮುಖ್ಯಮಂತ್ರಿಗಳು, ಸ್ವಚ್ಛ ಭಾರತ ಯೋಜನೆಯಡಿ ಪ.ಜಾತಿ / ಪ.ಪಂಗಡದ ಎಷ್ಟು ಕುಟುಂಬಗಳಿಗೆ ಶೌಚಾಲಯ ಮತ್ತು ಸ್ನಾನದ ಗೃಹ ನಿರ್ಮಾಣ ಮಾಡಲು ಧನಸಹಾಯ ನೀಡಲಾಗಿದೆ ಎಂಬ ವಿವರವನ್ನು ನೀಡಲು ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಆಯುಕ್ತರು, ಗ್ರಾಮೀಣಾಭಿವೃದ್ಧಿ ಇಲಾಖೆ ಇವರು ಈಗಾಗಲೇ ಬಹಳಷ್ಟು ಕುಟುಂಬಗಳಿಗೆ ಶೌಚಾಲಯ ಸೌಲಭ್ಯ ಒದಗಿಸಿದ್ದು, ಅಂಕಿ ಅಂಶಗಳನ್ನು ಸಂಗ್ರಹಿಸಿ ಸಲ್ಲಿಸುವುದಾಗಿ ತಿಳಿಸಿದರು.

ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ ಅಧಿಕಾರಿಗಳು ನಿಖರವಾದ ಅಂಕಿಅಂಶಗಳ ಮಾಹಿತಿ ಇಲ್ಲದೆ ಸಭೆಗೆ ಬಂದಿರುವುದು ಕಂಡುಬರುತ್ತದೆ ಈ ರೀತಿ ಪೂರ್ಣ ಮಾಹಿತಿ ಇಲ್ಲದೆ ಉನ್ನತ ಮಟ್ಟದ ಸಭೆಗಳಿಗೆ ಹಾಜರಾಗುವುದನ್ನು ಗಂಭೀರವಾಗಿ ಪರಿಗಣಿಸಲಾಗುವುದು. ಆದ್ದರಿಂದ ಎಲ್ಲಾ ಅಧಿಕಾರಿಗಳು ತಮ್ಮ ಕರ್ತವ್ಯಗಳನ್ನು ಗಂಭೀರವಾಗಿ ಪರಿಗಣಿಸಿ ಪೂರ್ಣ ಮಾಹಿತಿಯೊಂದಿಗೆ ಸಭೆಗಳಿಗೆ ಹಾಜರಾಗಲು ಸೂಚಿಸಿದರು.

ಗ್ರಾಮೀಣ ನೀರು ಸರಬರಾಜು ಯೋಜನೆಯಡಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ಆದ್ಯತೆ ನೀಡಿ ಪ.ಜಾತಿ/ಪ.ಪಂಗಡದ ಕುಟುಂಬಗಳಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸುವಂತೆ ಮತ್ತು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ರಾಜ್ಯ ಸರ್ಕಾರವು ಸಲ್ಲಿಸಿರುವ ಪ್ರಸ್ತಾವನೆಗೆ ಕೇಂದ್ರ ಸರ್ಕಾರ ಅನುಮೋದನೆ ಇನ್ನೂ ನೀಡದೇ

ಇರುವುದರಿಂದ ಈ ಕಾರ್ಯಕ್ರಮಕ್ಕೆ ಒದಗಿಸಿದ ರೂ.115.07 ಕೋಟಿ ಬಳಕೆಯ ಬಗ್ಗೆ ಸಮಾಜ ಕಲ್ಯಾಣ ಸಚಿವರೊಂದಿಗೆ ಸಮಾಲೋಚಿಸಿ ಮುಂದಿನ ಕ್ರಮ ಜರುಗಿಸಲು ಮಾನ್ಯ ಸಮಾಜ ಕಲ್ಯಾಣ ಸಚಿವರು ಸೂಚಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು
2. ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದ ನಂತರ ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಿ ಮುಂದಿನ ಕ್ರಮ ಕೈಗೊಳ್ಳುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ)**

**೮. ಅರಣ್ಯ ಇಲಾಖೆ :-**

೨೦೧೯-೨೦ ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.5.64 crs. + TSP : Rs.2.34 crs. ಒಟ್ಟು ಮೊತ್ತ : ರೂ.7.98 ಕೋಟಿಗಳು.

ಅರಣ್ಯ ಇಲಾಖೆಯ ಅಧಿಕಾರಿಗಳು ಮಾತನಾಡಿ ಸದರಿ ಇಲಾಖೆಗೆ ಕಡಿಮೆ ಅನುದಾನ ನೀಡಲಾಗಿದೆ ಎಂದು ಹೇಳಿ ಹೆಚ್ಚಿನ ಅನುದಾನ ನೀಡಲು ಕೋರಿದರು. ಹೊಸದಾಗಿ ರಾಷ್ಟ್ರೀಯ ಬಿದಿರು ಅಭಿಯಾನ ಕಾರ್ಯಕ್ರಮಕ್ಕೆ ರೂ.5.60 ಕೋಟಿ ಅನುದಾನ ನೀಡಿದ್ದು, ಸದರಿ ಅನುದಾನವನ್ನು ಬಿದಿರು ಬೆಳೆಯಲು ಉಪಯೋಗಿಸಲಾಗುವುದೆಂದು ತಿಳಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು
2. ರಾಷ್ಟ್ರೀಯ ಬಿದಿರು ಅಭಿಯಾನದಡಿ ಪ.ಜಾತಿ.ಪ.ಪಂಗಡದ ಬಿದಿರು ಬೆಳೆಯಲು ಪ್ರೋತ್ಸಾಹ ನೀಡುವುದು ಮತ್ತು ಬುಟ್ಟಿ ಹೆಣೆಯುವವರಿಗೆ ೫೦ ಬಿದಿರು ಬೊಂಬುಗಳನ್ನು ಉಚಿತವಾಗಿ ನೀಡುವುದು
3. ಕ್ರೈಸ್ ವಸತಿ ಶಾಲೆ ಮತ್ತು ವಿದ್ಯಾರ್ಥಿನಿಲಯಗಳ ಪ.ಜಾತಿ/ಪ.ಪಂಗಡದ ೯ ನೇ ತರಗತಿ ವಿದ್ಯಾರ್ಥಿಗಳಿಗೆ Wild Life exposure ಕ್ಯಾಂಪ್‌ಗಳನ್ನು ಆಯೋಜಿಸುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಇಲಾಖೆ)**

**೯. ಸಹಕಾರ ಇಲಾಖೆ:-**

೨೦೧೯-೨೦ ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP: Rs.564.87 crs. + TSP : Rs.412.00 crs. ಒಟ್ಟು ಮೊತ್ತ : ರೂ.೯೭೬.೮೭ ಕೋಟಿಗಳು

ರೈತರ ಸಾಲ ಮನ್ನಾ ಯೋಜನೆಯಡಿ ಸಹಕಾರ ಇಲಾಖೆಗೆ ರೂ.೮೭೦.೯೬ ಕೋಟಿ ಒದಗಿಸಿದ್ದು, ಈ ಸೌಲಭ್ಯ ಪಡೆಯುತ್ತಿರುವ ಫಲಾನುಭವಿಗಳ ಅಂಕಿ ಅಂಶಗಳನ್ನು ಒದಗಿಸಲು ಮಾನ್ಯ

ಉಪ ಮುಖ್ಯಮಂತ್ರಿಗಳು ಸೂಚಿಸಿದರು. ಕೃಷಿ ಜಮೀನು ಹೊಂದಿರುವ ಪ.ಜಾತಿ/ಪ.ಪಂಗಡದ ರೈತರ ಸಂಖ್ಯಾ ವಿವರಗಳನ್ನು ಕೃಷಿ ಇಲಾಖೆಯಿಂದ ಪಡೆಯಲು ತಿಳಿಸಿದರು.

ಸಹಕಾರ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಹಮಾಲಿಗಳಿಗೆ ಎ.ಪಿ.ಎಮ್.ಸಿ ಯಾರ್ಡ್‌ಗಳಲ್ಲಿ ಲಭ್ಯವಿರುವ ಜಮೀನಿನಲ್ಲಿ ಗೃಹ ನಿರ್ಮಾಣಕ್ಕೆ ಹೆಚ್ಚುವರಿ ಅನುದಾನ ಒದಗಿಸುವಂತೆ ಕೋರಿದರು. ಈ ಬಗ್ಗೆ ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು ಮಾತನಾಡಿ ಎಲ್ಲಾ ಪ.ಜಾತಿ/ಪ.ಪಂಗಡದ ವಸತಿ ರಹಿತರಿಗೆ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದಿಂದ ಮನೆಗಳನ್ನು ಮಂಜೂರು ಮಾಡಲಾಗುತ್ತಿದ್ದು, ಒಂದೊಂದು ಇಲಾಖೆಯಲ್ಲಿ ಪ್ರತ್ಯೇಕವಾಗಿ ಅದೇ ಕಾರ್ಯಕ್ರಮಗಳನ್ನು ತೆಗೆದುಕೊಳ್ಳುವುದು ಸೂಕ್ತವಲ್ಲ ಎಂದು ತಿಳಿಸಿದರು.

ಮೇಲ್ಕಂಡ ವಿಷಯದ ಬಗ್ಗೆ ಪರಿಶೀಲಿಸಲಾಗುವುದೆಂದು ಮಾನ್ಯ ಸಮಾಜ ಕಲ್ಯಾಣ ಸಚಿವರು ತಿಳಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು
2. ಸಾಲ ಮನ್ನಾ ಯೋಜನೆಯಡಿ ಸೌಲಭ್ಯ ಪಡೆದ/ಪಡೆಯುವ ಪ.ಜಾತಿ/ಪ.ಪಂಗಡದ ಫಲಾನುಭವಿಗಳ ಅಂಕಿ ಅಂಶಗಳನ್ನು ಮತ್ತು ಸಾಲ ಮನ್ನಾ ಮಾಡಿದ ಮೊತ್ತದ ಮಾಹಿತಿ ಒದಗಿಸುವುದು

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ)**

**10. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ:-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ -SCSP : Rs.115.27 crs. + TSP : Rs.63.08 crs. ಒಟ್ಟು ಮೊತ್ತ : ರೂ.178.32 ಕೋಟಿಗಳು

ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿ ಶೇ.25 ರಷ್ಟು ಪ.ಜಾತಿ/ಪ.ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದ್ದು ಅದರಂತೆ ಪ.ಜಾತಿ/ಪ.ಪಂಗಡದ ವಿದ್ಯಾರ್ಥಿನಿಲಯಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುತ್ತಿದೆ ಎಂದು ಸಭೆಗೆ ತಿಳಿಸಲಾಯಿತು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ)**

**11. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ - SCSP : Rs.990.73 crs. + TSP : Rs. 408.72 crs. ಒಟ್ಟು ಮೊತ್ತ : ರೂ.1399.45 ಕೋಟಿಗಳು

ಐ.ಸಿ.ಡಿ.ಎಸ್. ಯೋಜನೆಯಡಿ ಎಸ್.ಸಿ.ಎಸ್.ಪಿ ರಡಿ ರೂ. 72.00 ಕೋಟಿ ಮತ್ತು ಟಿ.ಎಸ್.ಪಿ ಯಡಿ ರೂ. 24.00 ಕೋಟಿ ಹಾಗೂ ಭಾಗ್ಯಲಕ್ಷ್ಮಿ ಯೋಜನೆಯಡಿ ಟಿ.ಎಸ್.ಪಿ ಯಡಿ ರೂ. 15.00 ಕೋಟಿ ಅನುದಾನವನ್ನು ಆದ್ಯರ್ಪಿಸುವ ಬಗ್ಗೆ ಪ್ರಸ್ತಾಪಿಸಲಾಯಿತು.

ಮಾನ್ಯ ಸದಸ್ಯರಾದ ಶ್ರೀ.ಹೆಚ್.ಕೆ.ಕುಮಾರಸ್ವಾಮಿ ಇವರು ಆದ್ಯರ್ಪಣೆ ಮಾಡುವ ಪ್ರಸ್ತಾಪಕ್ಕೆ ಆಕ್ಷೇಪಣೆ ವ್ಯಕ್ತಪಡಿಸಿ ಪ.ಜಾತಿ/ಪ.ಪಂಗಡದ ಮಹಿಳೆ ಮತ್ತು ಮಕ್ಕಳಲ್ಲಿ ಅಪೌಷ್ಠಿಕತೆ ಪ್ರಮಾಣ ಹೆಚ್ಚಿದ್ದು, ಆದ್ಯರ್ಪಣೆ ಮಾಡದೇ ಅನುದಾನವನ್ನು ಸಮರ್ಪಕವಾಗಿ ಬಳಸಲು ಸಲಹೆ ನೀಡಿದರು. ನೋಡಲ್ ಏಜೆನ್ಸಿ ಸಲಹೆಗಾರರು ಪ.ಜಾತಿ/ಪ.ಪಂಗಡದ ಮಕ್ಕಳಿಗೆ ಹೆಚ್ಚುವರಿಯಾಗಿ ಹಾಲು ನೀಡಲು ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಿದರು.

ಪ.ಜಾತಿ/ಪ.ಪಂಗಡದ ಮಕ್ಕಳ ಸಂಖ್ಯೆಗಿಂತ ಹೆಚ್ಚಿನ ಅನುದಾನ ನೀಡಿರುವ ಕಾರಣ ಉಳಿತಾಯವಾಗುವ ಅನುದಾನವನ್ನು ಆದ್ಯರ್ಪಿಸಲು ಪ್ರಸ್ತಾಪಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರು ತಿಳಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು
2. ಬಡವರ ಬಂಧು ಯೋಜನೆ ಮಾದರಿಯಲ್ಲಿ ಪ.ಜಾತಿ/ಪ.ಪಂಗಡದ ಮಹಿಳೆಯರಿಗೆ ರೂ.10000/- ಸಹಾಯಧನ
3. ಐ.ಸಿ.ಡಿ.ಎಸ್ ಯೋಜನೆಯಡಿ ಉಳಿಕೆಯಾಗುವ ಅನುದಾನವನ್ನು ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ಉಪಯೋಗಿಸುವುದು.
4. ನಗರ ಪ್ರದೇಶಗಳಲ್ಲಿ 100 ಅಂಗನವಾಡಿ ಕೇಂದ್ರಗಳ ನಿರ್ವಹಣಾ ವೆಚ್ಚ ಭರಿಸುವುದು

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ)**

**12. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.6.44 crs. + TSP : Rs.1.98 crs. ಒಟ್ಟು ಮೊತ್ತ : ರೂ.8.42 ಕೋಟಿಗಳು

ಮಾನ್ಯ ಸದಸ್ಯರಾದ ಶ್ರೀ.ಹೆಚ್.ಕೆ.ಕುಮಾರಸ್ವಾಮಿ ಇವರು ಪ.ಜಾತಿ/ಪಂಗಡದ ಚಲನಚಿತ್ರ ನಿರ್ಮಾಪಕರಿಗೆ ರೂ.25.00 ಲಕ್ಷ ಪ್ರೋತ್ಸಾಹಧನ ನೀಡಲು ಸಲಹೆ ನೀಡಿದರು. ಸಾಮಾನ್ಯ ವರ್ಗದವರಿಗಿಂತ ರೂ.5.00 ಲಕ್ಷ ಹೆಚ್ಚುವರಿಯಾಗಿ ಪ್ರೋತ್ಸಾಹಧನ ನೀಡುತ್ತಿರುವ ವಿವರವನ್ನು ನೋಡಲ್ ಏಜೆನ್ಸಿ ಸಲಹೆಗಾರರು ಸಭೆಯ ಅವಗಾಹನೆಗೆ ತಂದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ)**

**13. ಪ್ರವಾಸೋದ್ಯಮ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP: Rs.8.99 crs. + TSP: Rs.3.75 crs. ಒಟ್ಟು ಮೊತ್ತ: ರೂ.12.74 ಕೋಟಿಗಳು

ಮಾನ್ಯ ಸದಸ್ಯರಾದ ಹೆಚ್.ಕೆ. ಕುಮಾರಸ್ವಾಮಿ ಹಾಗೂ ಡಾ.ಕೆ.ಅನ್ನದಾನಿ ಇವರು ಪ್ರವಾಸಿ ಟ್ಯಾಕ್ಸಿಗಳಿಗೆ ಹೆಚ್ಚಿನ ಬೇಡಿಕೆ ಇರುವುದರಿಂದ ಪ್ರತಿ ಕ್ಷೇತ್ರಕ್ಕೆ ಕನಿಷ್ಠ 50 ಗುರಿ ನಿಗದಿಪಡಿಸುವಂತೆ ಸಲಹೆ ನೀಡಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ಸಮಾಜ ಕಲ್ಯಾಣ ಇಲಾಖೆಯಿಂದ ಐರಾವತ ಯೋಜನೆಯಡಿ ಪ.ಜಾತಿ / ಪ.ಪಂಗಡದ ಫಲಾನುಭವಿಗಳಿಗೆ ವಾಹನ ವಿತರಣೆ ಮಾಡಲಾಗುತ್ತಿದೆ ಎಂಬ ಅಂಶವನ್ನು ಸಭೆಯ ಗಮನಕ್ಕೆ ತಂದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು
2. ಕ್ರೈಸ್ ವಸತಿ ಶಾಲೆಯ ವಿದ್ಯಾರ್ಥಿಗಳಿಗೆ ಸಹ ಕರ್ನಾಟಕ ದರ್ಶನ ಕಾರ್ಯಕ್ರಮದಲ್ಲಿ ಸೇರಿಸಿಕೊಳ್ಳಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ)**

**14. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP: Rs.13.18 crs. + TSP: Rs.12.09 crs. ಒಟ್ಟು ಮೊತ್ತ: ರೂ.25.27 ಕೋಟಿಗಳು

ಸಮಾಜ ಕಲ್ಯಾಣ ಇಲಾಖೆಯಿಂದ ಕ್ರೀಡಾ ಪಟುಗಳಿಗೆ ಪ್ರೋತ್ಸಾಹ ನೀಡಲು ಸ್ಪೂರ್ತಿ ಎಂಬ ಯೋಜನೆಯನ್ನು ಜಾರಿಗೆ ತರಲಾಗುತ್ತಿದೆ ಎಂದು ಸಮಾಜ ಕಲ್ಯಾಣ ಸಚಿವರು ಸಭೆಯ ಅವಗಾಹನೆಗೆ ತಂದರು.

ಪ್ರಸ್ತಾಪಿಸಿದ ಕ್ರಿಯಾ ಯೋಜನೆಗಳನ್ನು ಪರಿಶೀಲಿಸಿ ಕ್ರಿಯಾ ಯೋಜನೆಗಳಿಗೆ ರಾಜ್ಯ ಪರಿಷತ್ತಿನ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ).**

**15. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.815.50 crs. + TSP : Rs.299.31 crs. ಒಟ್ಟು ಮೊತ್ತ : ರೂ.1114.81 ಕೋಟಿಗಳು.

ಮಾನ್ಯ ಉಪ ಮುಖ್ಯಮಂತ್ರಿಗಳು ಅನ್ನಭಾಗ್ಯ ಯೋಜನೆಯು ಸಾಮಾನ್ಯ ಕಾರ್ಯಕ್ರಮವಾಗಿರುವುದರಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ.ಯಡಿ ಅನುದಾನ ನೀಡುತ್ತಿರುವುದು ಸಮಂಜಸವಲ್ಲ ಮತ್ತು ಈ ಸೌಲಭ್ಯ ಪಡೆಯುತ್ತಿರುವ ಪ.ಜಾತಿ/ಪ.ಪಂಗಡದ

ಫಲಾನುಭವಿಗಳ ಅಂಕಿ ಸಂಖ್ಯೆಗಳಿಗೆ ಅನುಗುಣವಾಗಿ ಅನುದಾನ ನೀಡಬಹುದಾಗಿದೆ ಎಂದು ತಿಳಿಸಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳ ಮಾಹಿತಿ ಸಲ್ಲಿಸಲಾಗುವುದೆಂದು ಸಭೆಗೆ ತಿಳಿಸಿದರು.

ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು ಮಾತನಾಡಿ ಹಂಚಿಕೆ ಮಾಡಬಹುದಾದ ಆಯವ್ಯಯದಲ್ಲಿ ಶೇ.24.10 ಮೊತ್ತವನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಗಳಿಗೆ ನೀಡುತ್ತಿದ್ದು, ಅನ್ನಭಾಗ್ಯ ಕಾರ್ಯಕ್ರಮದಲ್ಲಿ ಪ.ಜಾತಿ/ಪ.ಪಂಗಡ ಫಲಾನುಭವಿಗಳು ಇರುವುದರಿಂದ ಭಾಗಶಃ ಅನುದಾನವನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ರಡಿ ನೀಡಲಾಗಿದೆ ಎಂದು ಉತ್ತರಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸುವುದು
2. ಅನ್ನಭಾಗ್ಯ ಯೋಜನೆಯಡಿ ಪ.ಜಾತಿ/ಪ.ಪಂಗಡದ ಫಲಾನುಭವಿಗಳ ಅಂಕಿ ಅಂಶಗಳನ್ನು ನೀಡುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ)**

**16. ಕಂದಾಯ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs. 1917.97 crs. + TSP : Rs.793.17 crs. ಒಟ್ಟು ಮೊತ್ತ : ರೂ. 2711.14 ಕೋಟಿಗಳು

ಕಂದಾಯ ಇಲಾಖೆಯಿಂದ ವಿವಿಧ ರೀತಿಯ ಪಿಂಚಣಿಗಳಿಗೆ ಮತ್ತು ಆರಾಧನಾ ಯೋಜನೆಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನ ನೀಡಲಾಗಿದೆ.

ಆದರೆ ಪ.ಜಾತಿ/ಪ.ಪಂಗಡದ ಪಿಂಚಣಿದಾರರ ಅಂಕಿ ಅಂಶಗಳನ್ನು ಒದಗಿಸಲು ಮತ್ತು ನೇರವಾಗಿ ಪಿಂಚಣಿದಾರರ ಖಾತೆಗೆ ಜಮೆ ಆಗುತ್ತಿರುವ ಬಗ್ಗೆ ಕ್ರಮವಹಿಸಲು ಮಾನ್ಯ ಉಪ ಮುಖ್ಯಮುಖ್ಯಮಂತ್ರಿಗಳು ಸೂಚಿಸಿದರು.

ಮಾನ್ಯ ಸದಸ್ಯರಾದ ಡಾ: ಕೆ. ಅನ್ನದಾನಿ ಇವರು ಆರಾಧನಾ ಯೋಜನೆಯಡಿಯಲ್ಲಿ ಎಸ್.ಸಿ /ಎಸ್.ಟಿ ಕಾಲೋನಿಗಳಲ್ಲಿ ಮಂದಿರಗಳ ದುರಸ್ತಿ ಮತ್ತು ಜೀರ್ಣೋದ್ಧಾರಕ್ಕಾಗಿ ಹೆಚ್ಚಿನ ಅನುದಾನ ಹಂಚಿಕೆ ಮಾಡಲು ಸಲಹೆ ನೀಡಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸುವುದು
2. ಪ.ಜಾತಿ/ಪ.ಪಂಗಡದ ಪಿಂಚಣಿದಾರರ ಅಂಕಿ ಅಂಶಗಳನ್ನು ಒದಗಿಸುವುದು ಮತ್ತು ನೇರವಾಗಿ ಪಿಂಚಣಿದಾರರ ಖಾತೆಗೆ ಜಮೆ ಆಗುತ್ತಿರುವ ಬಗ್ಗೆ ಕ್ರಮವಹಿಸುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ)**

**17. ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.3.00 crs. + TSP : Rs.1.00 crs. ಒಟ್ಟು ಮೊತ್ತ : ರೂ.4.00 ಕೋಟಿಗಳು

ಸದರಿ ಅನುದಾನವನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನ ಮಾಡುತ್ತಿರುವ ಉನ್ನತಿ ಕಾರ್ಯಕ್ರಮಕ್ಕೆ ವರ್ಗಾಯಿಸಲು ಐ.ಟಿ.ಬಿ.ಟಿ ಇಲಾಖೆಗೆ ಸೂಚಿಸಲಾಗಿದೆ ಎಂದು ಮಾನ್ಯ ಸಮಾಜ ಕಲ್ಯಾಣ ಸಚಿವರು ಸಭೆಯ ಗಮನಕ್ಕೆ ತಂದರು.

ಸದರಿ ಪ್ರಸ್ತಾವನೆಗೆ ರಾಜ್ಯ ಪರಿಷತ್ತಿನ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ)**

**18. ವಸತಿ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.933.79 crs. + TSP : Rs.304.20 crs. ಒಟ್ಟು ಮೊತ್ತ : ರೂ. 1237.99 ಕೋಟಿಗಳು

ಮಾನ್ಯ ಉಪ ಮುಖ್ಯಮಂತ್ರಿಗಳು, ವಸತಿ ಸೌಲಭ್ಯ ಒದಗಿಸಲು ಇನ್ನೂ ಎಷ್ಟು ಕುಟುಂಬಗಳು ಬಾಕಿಯಿವೆ? ಮತ್ತು ಅದನ್ನು ಪೂರೈಸಲು ಎಷ್ಟು ಅನುದಾನ ಬೇಕಾಗಿದೆ ಎಂದು ಪ್ರಶ್ನಿಸಿದರು. ಕಾರ್ಯದರ್ಶಿ, ವಸತಿ ಇಲಾಖೆ ಮತ್ತು ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ಇವರು ಡಾ॥ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆಯಡಿ 6.28 ಲಕ್ಷ ಮನೆಗಳ ಗುರಿ ನಿಗದಿಪಡಿಸಿದ್ದು, ಒಟ್ಟು ರೂ.10851.00 ಕೋಟಿಗಳು ಬೇಕಾಗಿದೆ. ಅದರಲ್ಲಿ ಕಳೆದ 3 ವರ್ಷಗಳಲ್ಲಿ ರೂ.3356.00 ಕೋಟಿ ಅನುದಾನ ಒದಗಿಸಿದ್ದು, ಈ ಅನುದಾನವನ್ನು ವೆಚ್ಚ ಮಾಡಲಾಗಿದೆ. ಗುರಿಯನ್ನು ಪೂರ್ಣಗೊಳಿಸಲು ಉಳಿದ ರೂ.7495.00 ಕೋಟಿ ಅನುದಾನದ ಅವಶ್ಯಕತೆ ಇರುತ್ತದೆ ಎಂದು ಸಭೆಯ ಗಮನಕ್ಕೆ ತಂದರು. ನಗರ ಪ್ರದೇಶಗಳಲ್ಲಿ ಮನೆಗಳ ನಿರ್ಮಾಣಕ್ಕಾಗಿ ನಗರಾಭಿವೃದ್ಧಿ ಇಲಾಖೆಯಿಂದ ಅನುದಾನ ಒದಗಿಸಲು ಕೋರಿದರು.

ಮಾನ್ಯ ಉಪ ಮುಖ್ಯಮಂತ್ರಿಗಳು ವಸತಿ ರಹಿತ ಪ.ಜಾತಿ/ಪ.ಪಂಗಡದವರಿಗೆ ಮನೆಗಳನ್ನು ನಿರ್ಮಿಸುವುದು ಆದ್ಯತಾ ಕಾರ್ಯಕ್ರಮವಾಗಿದ್ದು, ಹೆಚ್ಚುವರಿ ಅನುದಾನ ಒದಗಿಸುವ ಬಗ್ಗೆ ಆರ್ಥಿಕ ಇಲಾಖೆಯ ಅಭಿಪ್ರಾಯ ಕೇಳಿದರು.

ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರು ಯಾವುದಾದರೂ ಇಲಾಖೆಗಳು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಒದಗಿಸಿದ ಅನುದಾನದಲ್ಲಿ ಉಳಿಕೆಯಾಗುವ ಅನುದಾನವನ್ನು ಆದ್ಯರ್ಪಣೆ ಮಾಡಿದಲ್ಲಿ ವಸತಿ ಇಲಾಖೆಗೆ ಹೆಚ್ಚುವರಿ ಅನುದಾನ ಹಂಚಿಕೆ ಮಾಡುವ ಬಗ್ಗೆ ಪರಿಶೀಲಿಸಬಹುದಾಗಿದೆ ಮತ್ತು ಎಸ್.ಸಿ.ಎಸ್.ಪಿ/ಟಿಎಸ್.ಪಿ ರಡಿ ಆದ್ಯತೆ ಮೇಲೆ ವಸತಿ ಕಾರ್ಯಕ್ರಮಕ್ಕೆ ಹೆಚ್ಚಿಗೆ ಅನುದಾನ ನೀಡುವ ಬಗ್ಗೆ ಸರ್ಕಾರ ನಿರ್ಧರಿಸಿದಲ್ಲಿ ಅದರಂತೆ ಕ್ರಮವಹಿಸಲಾಗುವುದು ಎಂದು ಹೇಳಿದರು.

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರು ಕಳೆದ ಸಾಲಿನಲ್ಲಿ ಕೆಲವೊಂದು ಇಲಾಖೆಗಳು ಆದ್ಯರ್ಪಿಸಿದ ಅನುದಾನದಲ್ಲಿ ರೂ.500.00 ಕೋಟಿಗಳನ್ನು ವಸತಿ ಇಲಾಖೆಗೆ ಹೆಚ್ಚುವರಿಯಗಿ ವಸತಿ ಇಲಾಖೆಗೆ ನೀಡಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು
2. ಕೊಳಚೆ ಅಭಿವೃದ್ಧಿ ಮಂಡಳಿ ವತಿಯಿಂದ ನಿರ್ಮಿಸುವ ಮನೆಗಳ ಫಲಾನುಭವಿಗಳ ವಂತಿಗೆಯಲ್ಲಿ ಶೇ.50 ರಷ್ಟನ್ನು ಸರ್ಕಾರದಿಂದ ಭರಿಸುವುದು. ಉಳಿದ ಶೇ.50 ರಷ್ಟು ಫಲಾನುಭವಿಗಳು ಭರಿಸುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಕಾರ್ಯದರ್ಶಿ, ವಸತಿ ಇಲಾಖೆ)**

**19. ಉನ್ನತ ಶಿಕ್ಷಣ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP: Rs.95.58 crs. + TSP : Rs.34.96 crs. ಒಟ್ಟು ಮೊತ್ತ: ರೂ.130.54 ಕೋಟಿಗಳು

ಮಾನ್ಯ ಉಪ ಮುಖ್ಯಮಂತ್ರಿಗಳು 2017-18 ನೇ ಸಾಲಿನಲ್ಲಿ ಪ್ರಾರಂಭಿಸಿದ ಡಾ:ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಇದರ ನಿರ್ವಹಣೆಗೆ ಯಾವ ಲೆಕ್ಕ ಶೀರ್ಷಿಕೆಯಡಿ ಅನುದಾನ ಒದಗಿಸಲಾಗುತ್ತಿದೆ ಎಂಬ ಬಗ್ಗೆ ಮಾಹಿತಿ ಒದಗಿಸುವಂತೆ ಇಲಾಖಾ ಅಧಿಕಾರಿಗಳಿಗೆ ಸೂಚಿಸಿದರು.

ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಇವರು ಎಸ್.ಸಿ.ಎಸ್.ಪಿ ರಡಿ ಉನ್ನತ ಶಿಕ್ಷಣ ಇಲಾಖೆಗೆ ಈ ಹಿಂದೆ ಒದಗಿಸಿದ ಅನುದಾನದಲ್ಲಿ ಡಾ: ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ್ನು ಸ್ಥಾಪಿಸಲಾಗಿದ್ದು, ಕಟ್ಟಡ ನಿರ್ಮಾಣ ಮತ್ತು ಇತರ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಉಪಯೋಗಿಸಲಾಗುತ್ತಿದೆ. ಕಟ್ಟಡ ಕಾಮಗಾರಿಗಳು ಮುಕ್ತಾಯ ಹಂತದಲ್ಲಿದ್ದು, ಹೆಚ್ಚುವರಿ ಅನುದಾನ ಒದಗಿಸುವಂತೆ ಕೋರಿದರು.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರು 2019-20 ನೇ ಸಾಲಿನಲ್ಲಿ ರಾಜಸ್ವ ಲೆಕ್ಕ ಶೀರ್ಷಿಕೆಯಡಿ ಒದಗಿಸಿರುವ ಬಳಕೆಯಾಗದ ಮೊತ್ತವನ್ನು ವಸತಿ ಕಾಲೇಜು ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಬಳಸಿಕೊಳ್ಳಲು ಅವಕಾಶವಿರುವುದಿಲ್ಲ ಮತ್ತು ಈ ಅನುದಾನವನ್ನು ನಿರ್ವಹಣೆಗಾಗಿ ಬಳಸಿಕೊಳ್ಳಲು ತಿಳಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳು ಡಾ: ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ್ನು ಎಸ್.ಸಿ.ಎಸ್.ಪಿ ಅಡಿ ಒದಗಿಸಿದ ಅನುದಾನದಲ್ಲಿ ಪ್ರಾರಂಭಿಸಿದ್ದರೂ ಕೂಡ ಇಲಾಖೆಯ ಸಾಮಾನ್ಯ ಕಾರ್ಯಕ್ರಮದಡಿ ಅನುದಾನ ಒದಗಿಸುವಂತೆ ಇಲಾಖಾ ಅಧಿಕಾರಿಗಳಿಗೆ ಸೂಚಿಸಿದರು.

ಉನ್ನತ ಶಿಕ್ಷಣ ಇಲಾಖೆಯಿಂದ ಲ್ಯಾಪ್‌ಟಾಪ್‌ಗಳನ್ನು ನೀಡಲಾಗುತ್ತಿರುವ ಬಗ್ಗೆ ಸಭೆಯ ಗಮನ ಸೆಳೆಯಲಾಗಿದ್ದು, ಎಲ್ಲಾ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ನೀಡಲು ಮಾನ್ಯ ಉಪ ಮುಖ್ಯಮಂತ್ರಿಗಳು ಪ್ರಸ್ತಾಪಿಸಿದರು.

ಉನ್ನತ ಶಿಕ್ಷಣ, ಕೃಷಿ, ಪಶುಸಂಗೋಪನೆ, ತೋಟಗಾರಿಕೆ ಮತ್ತು ಕಾನೂನು ಇಲಾಖೆಗಳ ವ್ಯಾಪ್ತಿಯಲ್ಲಿ ಬರುವ ವಿಶ್ವವಿದ್ಯಾಲಯಗಳಿಗೆ ಎಸ್.ಸಿ.ಎಸ್.ಪಿ/ಟಿಎಸ್.ಪಿ ರಡಿ ಅನುದಾನ ನೀಡುತ್ತಿದ್ದು, ಸದರಿ ಅನುದಾನವನ್ನು ಪ.ಜಾತಿ/ಪ.ಪಂಗಡದ ವಿದ್ಯಾರ್ಥಿಗಳಿಗೆ ಇ.ಬಿ.ಎಲ್ ವೆಚ್ಚ ಮತ್ತು ಲ್ಯಾಪ್‌ಟಾಪ್/ಪುಸ್ತಕ/ಶುಲ್ಕ ಭರಿಸಲು ವೆಚ್ಚ ಮಾಡಲಾಗುತ್ತಿದ್ದು, ಆಯಾ ಇಲಾಖೆಗಳಿಂದ ಪ.ಜಾತಿ/ಪ.ಪಂಗಡದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗುತ್ತಿದೆ ಎಂದು ಸಭೆಯ ಗಮನಕ್ಕೆ ತಂದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು
2. ಬಳಕೆಯಾಗದ ಅನುದಾನ ರಾಜಸ್ವ ಲೆಕ್ಕ ಶೀರ್ಷಿಕೆಯಡಿ ಇದ್ದು ಕಟ್ಟಡ ನಿರ್ಮಾಣಕ್ಕೆ ಬಳಸುವ ಬಗ್ಗೆ ಬಂಡವಾಳ ಲೆಕ್ಕ ಶೀರ್ಷಿಕೆಯಡಿ ಒದಗಿಸಲು ಪರಿಷತ್ ಒಪ್ಪಿಗೆ ಸೂಚಿಸಿದ್ದು, ಆರ್ಥಿಕ ಇಲಾಖೆಯನ್ನು ಸಂಪರ್ಕಿಸಿ ಮುಂದಿನ ಕ್ರಮ ಕೈಗೊಳ್ಳುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ)**

**20. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.786.69 crs. + TSP : Rs.315.06 crs. ಒಟ್ಟು ಮೊತ್ತ : ರೂ.1101.75 ಕೋಟಿಗಳು

ಇಲಾಖೆಯಲ್ಲಿ ಎಲ್ಲಾ ಕಾರ್ಯಕ್ರಮಗಳು ಮುಂದುವರೆದ ಕಾರ್ಯಕ್ರಮಗಳಾಗಿದ್ದು, ಅನುಮೋದನೆ ನೀಡಲು ಮತ್ತು ಕ್ಷೀರ ಭಾಗ್ಯ ಸೌಲಭ್ಯವನ್ನು ಕ್ರೈಸ್ ವಸತಿ ಶಾಲೆ/ಆಶ್ರಮ ಶಾಲೆಗಳಲ್ಲಿರುವ ವಿದ್ಯಾರ್ಥಿಗಳಿಗೂ ಸಹ ವಿಸ್ತರಿಸಲು ಕೋರಲಾಯಿತು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು
2. ಕ್ಷೀರ ಭಾಗ್ಯ ಸೌಲಭ್ಯವನ್ನು ಕ್ರೈಸ್ ವಸತಿ ಶಾಲೆ/ಆಶ್ರಮ ಶಾಲೆಗಳಲ್ಲಿರುವ ವಿದ್ಯಾರ್ಥಿಗಳಿಗೂ ಸಹ ವಿಸ್ತರಿಸುವುದು.(ಕ್ರೈಸ್ ಸಂಸ್ಥೆಯವರು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ಹಾಗೂ ಪಶುಸಂಗೋಪನೆ ಇಲಾಖೆಗಳನ್ನು ಸಂಪರ್ಕಿಸುವುದು)

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ)**

**21. ಕೈಮಗ್ಗ ಮತ್ತು ಜವಳಿ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.52.19 crs. + TSP : Rs.21.29 crs. ಒಟ್ಟು ಮೊತ್ತ : ರೂ.73.48 ಕೋಟಿಗಳು

ಮಾನ್ಯ ಉಪ ಮುಖ್ಯಮಂತ್ರಿಗಳು, ವಿದ್ಯುತ್ ಮಗ್ಗಗಳ ತರಬೇತಿ ಮತ್ತು ನೇಕಾರರ ವಸತಿ ಕಾರ್ಯಾಗಾರ ನಿರ್ಮಾಣ ಮತ್ತು ಸುಧಾರಿತ ಹೊಲಿಗೆ ಯಂತ್ರಗಳಿಗೆ ಸಹಾಯಧನ ಪಡೆದ ಫಲಾನುಭವಿಗಳ ವಿವರ ನೀಡುವಂತೆ ಸೂಚಿಸಿದರು.

ಆಯುಕ್ತರು, ಕೈಮಗ್ಗ ಮತ್ತು ಜವಳಿ ಇಲಾಖೆ ಇವರು ವಿದ್ಯುತ್ ಮಗ್ಗದ ಬಳಕೆಯ ಬಗ್ಗೆ ನೇಕಾರರಿಗೆ ತರಬೇತಿ ನೀಡಿ ವಿದ್ಯುತ್ ಮಗ್ಗಗಳನ್ನು ಒದಗಿಸಲಾಗುತ್ತಿದೆ ಮತ್ತು ನೇಕಾರರಿಗೆ ಕೈಮಗ್ಗ/ವಿದ್ಯುತ್ ಮಗ್ಗಗಳಲ್ಲಿ ಉತ್ಪಾದನೆ ಹೆಚ್ಚಿಸಲು ಆಧುನಿಕ/ಸುಧಾರಿತ ಸಲಕರಣೆಗಳನ್ನು ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ಸದರಿ ಇಲಾಖೆಯಿಂದ ಜವಳಿ ಎಮ್.ಎಸ್.ಎಮ್.ಇ ಘಟಕಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ಸಹಾಯಧನ ಕುರಿತು ಮತ್ತು ಸಾಮಾನ್ಯವಾಗಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ ಎಮ್.ಎಸ್.ಎಮ್.ಇ ಘಟಕಗಳಿಗೆ ನೀಡಲಾಗುತ್ತಿರುವ ವಿವಿಧ ಸವಲತ್ತುಗಳ ಹಿನ್ನೆಲೆಯಲ್ಲಿ ಮರುಪರಿಶೀಲಿಸಲು ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯ ನೋಡಲ್ ಏಜೆನ್ಸಿ ಸಭೆಯಲ್ಲಿ ತೀರ್ಮಾನಿಸಲಾಗಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು.

2019-20 ನೇ ಸಾಲಿನಲ್ಲಿ ಸಿದ್ಧ ಉಡುಪು ಕಾರ್ಮಿಕರಿಗೆ ವಸತಿ ಯೋಜನೆ ಕಾರ್ಯಕ್ರಮವನ್ನು ಹೊಸದಾಗಿ ಪ್ರಸ್ತಾಪಿಸಿದ್ದು, ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗಿದೆ. ಆದರೆ ಈ ಬಗ್ಗೆ ಸರ್ಕಾರದಿಂದ ಮಾರ್ಗಸೂಚಿ ಇತ್ಯಾದಿ ನೀಡಲು ಕ್ರಮವಹಿಸಲಾಗುತ್ತಿದೆ ಎಂದು ಇಲಾಖೆಯ ಅಧಿಕಾರಿಗಳು ತಿಳಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸುವುದು
2. ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯಡಿ ಮತ್ತು ಸಿದ್ಧ ಉಡುಪು ನೀತಿ ಜಾರಿ ಯೋಜನೆಗಳಲ್ಲಿ ಜವಳಿ ಎಮ್.ಎಸ್.ಎಮ್.ಇ ಘಟಕಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ಸಹಾಯಧನ ಕುರಿತು ಮತ್ತು ಸಾಮಾನ್ಯವಾಗಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ ಎಮ್.ಎಸ್.ಎಮ್.ಇ ಘಟಕಗಳಿಗೆ ನೀಡಲಾಗುತ್ತಿರುವ ವಿವಿಧ ಸವಲತ್ತುಗಳ ಹಿನ್ನೆಲೆಯಲ್ಲಿ ಮಾನ್ಯ ಸಮಾಜ ಕಲ್ಯಾಣ ಇಲಾಖೆಯ ಸಚಿವರು ಮರುಪರಿಶೀಲಿಸಿ ಸೂಕ್ತ ತೀರ್ಮಾನ ಕೈಗೊಳ್ಳುವುದು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಕಾರ್ಯದರ್ಶಿ, ಕೈಮಗ್ಗ ಮತ್ತು ಜವಳಿ ಇಲಾಖೆ)**

## 22. ಭಾರೀ ಮತ್ತು ಮಧ್ಯಮ ಕೈಗಾರಿಕಾ ಇಲಾಖೆ ಮತ್ತು ಸಣ್ಣ ಕೈಗಾರಿಕೆ ಇಲಾಖೆ:-

2019-20 ನೇ ಸಾಲಿನಲ್ಲಿ ಭಾರಿ ಮತ್ತು ಮಧ್ಯಮ ಕೈಗಾರಿಕಾ ಇಲಾಖೆಗೆ ಹಂಚಿಕೆಯಾದ ಅನುದಾನ – SCSP : Rs.1.08 crs. + TSP : Rs.0.20 crs. ಒಟ್ಟು ಮೊತ್ತ : ರೂ.1.28 ಕೋಟಿಗಳು ಮತ್ತು ಸಣ್ಣ ಕೈಗಾರಿಕಾ ಇಲಾಖೆಗೆ ಹಂಚಿಕೆಯಾದ ಅನುದಾನ –SCSP : Rs.55.70 crs. + TSP : Rs.19.17 crs. ಒಟ್ಟು ಮೊತ್ತ: ರೂ.74.87 ಕೋಟಿಗಳು

ಮಾನ್ಯ ಉಪ ಮುಖ್ಯಮಂತ್ರಿಗಳು ಕೈಗಾರಿಕಾ ಅಭಿವೃದ್ಧಿ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಕೈಗಾರಿಕಾ ನಿವೇಶನಗಳ ಹಂಚಿಕೆಯನ್ನು ಮೀಸಲಾತಿ

ಪ್ರಕಾರ ಮಾಡುತ್ತಿಲ್ಲ ಮತ್ತು ನಿವೇಶನಗಳ ಹಂಚಿಕೆಯಲ್ಲಿ ತಾರತಮ್ಯ ಮಾಡಲಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ ಕಳೆದ 5 ವರ್ಷಗಳಲ್ಲಿ ನಿವೇಶನಗಳ ಹಂಚಿಕೆ ಮಾಡಿರುವ ಬಗ್ಗೆ ಮಾಹಿತಿ ಒದಗಿಸುವಂತೆ ಇಲಾಖಾ ಅಧಿಕಾರಿಗಳಿಗೆ ಸೂಚಿಸಿದರು.

ಮಾನ್ಯ ಸದಸ್ಯರಾದ ಶ್ರೀ.ಹೆಚ್.ಕೆ.ಕುಮಾರಸ್ವಾಮಿ, ಇವರು ಕೈಗಾರಿಕಾ ನಿವೇಶನಗಳ ಹಂಚಿಕೆಗೆ ಸಹಾಯಧನ ಕಾರ್ಯಕ್ರಮಕ್ಕೆ ಕೇವಲ ರೂ. 1.28 ಕೋಟಿ ಮಾತ್ರ ಅನುದಾನ ಒದಗಿಸಿದ್ದು, ಇದರಿಂದ ಹೆಚ್ಚಿನ ಫಲಾನುಭವಿಗಳಿಗೆ ಪ್ರಯೋಜನ ದೊರೆಯುವುದಿಲ್ಲವೆಂದು ತಿಳಿಸಿ ಹೆಚ್ಚುವರಿ ಅನುದಾನ ಒದಗಿಸುವಂತೆ ಹಾಗೂ ಪ್ರಸ್ತುತ ನಿವೇಶನಗಳಿಗೆ ನೀಡಲಾಗುತ್ತಿರುವ ಶೇ.50 ಸಹಾಯಧನವನ್ನು ಶೇ.75 ಕ್ಕೆ ಹೆಚ್ಚಿಸಲು ಮತ್ತು ಉಳಿದ ಶೇ.25 ರಷ್ಟು ಮೊತ್ತವನ್ನು ಕೆ.ಎಸ್.ಎಫ್.ಸಿ ವತಿಯಿಂದ ಸಾಲ ನೀಡಲು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಡಿ ಎಮ್.ಎಸ್.ಎಮ್.ಇ ನಿರ್ದೇಶನಾಲಯವನ್ನು ಪ್ರಾರಂಭಿಸಿದ್ದು, ಸದರಿ ಇಲಾಖೆಗೆ 2019-20 ನೇ ಸಾಲಿನಲ್ಲಿ ರಾಜ್ಯವಲಯದಲ್ಲಿ ರೂ.71.07 ಕೋಟಿ ಒದಗಿಸಲಾಗಿದೆ. ಈ ಅನುದಾನದಲ್ಲಿಯೇ ಕೆ.ಎಸ್.ಎಸ್.ಐ.ಡಿ.ಸಿ/ ಕೆ.ಐ.ಎ.ಡಿ.ಬಿ ವತಿಯಿಂದ ನಿವೇಶನಗಳ ಹಂಚಿಕೆಗೆ ತಗಲುವ ವೆಚ್ಚ ಭರಿಸಲಾಗುವುದು ಎಂದು ಕ್ರಿಯಾ ಯೋಜನೆಯಲ್ಲಿ ಪ್ರಸ್ತಾಪಿಸಲಾಗಿದೆ.

ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಲ್ಲಿ ಕೈಗಾರಿಕಾ ನಿವೇಶನ ಹಂಚಿಕೆಯನ್ನು 99 ವರ್ಷಗಳಿಗೆ ಲೀಸ್ ಕಮ್ ಸೇಲ್ ಆಧಾರದಲ್ಲಿ ನೀಡಲಾಗುತ್ತಿದೆ. ಆದರೆ ಹಿಂದಿನ ವರ್ಷ ಪ.ಜಾತಿ/ಪ.ಪಂಗಡದ ಮತ್ತು ಇತರರಿಗೆ 2 ಎಕರೆ ಒಳಗೆ ಕೈಗಾರಿಕಾ ನಿವೇಶನಗಳನ್ನು 10 ವರ್ಷಗಳಿಗೆ ಲೀಸ್ ಕಮ್ ಸೇಲ್ ಆಧಾರದಲ್ಲಿ ನೀಡಲು ಆದೇಶವಾಗಿರುತ್ತದೆ. ಆದ್ದರಿಂದ ಹೆಚ್ಚಿನ ಪ.ಜಾತಿ/ಪ.ಪಂಗಡದವರು 2 ಎಕರೆ ಮಿತಿಯಲ್ಲಿ ನಿವೇಶನಗಳನ್ನು ನೀಡಲು ಅರ್ಜಿ ಸಲ್ಲಿಸುತ್ತಿದ್ದಾರೆ. ಕಾರಣ ಎಮ್.ಎಸ್.ಎಮ್.ಇ ನಿರ್ದೇಶನಾಲಯದಿಂದ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ನೋಡಲ್ ಏಜೆನ್ಸಿ ಸಲಹೆಗಾರರು ತಿಳಿಸಿದರು.

ರಾಜ್ಯ ಪರಿಷತ್ತಿನ ಎಲ್ಲಾ ನಾಮ ನಿರ್ದೇಶಿತ ಸದಸ್ಯರು ಕೆ.ಎಸ್.ಎಫ್.ಸಿ ಮತ್ತು ಬ್ಯಾಂಕ್‌ಗಳಿಂದ ನೀಡಲಾಗುತ್ತಿರುವ ಶೇ.4 ಬಡ್ಡಿದರವನ್ನು ಶೇ.2 ಕ್ಕೆ ಇಳಿಸಲು ಒತ್ತಾಯಿಸಿದರು. ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು ಮಾತನಾಡಿ ಬಡ್ಡಿಯ ಉಳಿಕೆ ವ್ಯತ್ಯಾಸವನ್ನು ಸರ್ಕಾರವೇ ಭರಿಸುತ್ತಿದ್ದು, ಉದ್ದಿಮೆದಾರರು ಶೇ.4 ರಷ್ಟು ಭರಿಸುವುದು ಸೂಕ್ತವೆಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು.
2. ಕೈಗಾರಿಕಾ ನಿವೇಶನ ನೀಡುವಲ್ಲಿ ಹಾಲಿ ಇರುವ ಸಹಾಯಧನ ಮಿತಿ ಶೇ.50 ರಿಂದ ಶೇ.75 ಕ್ಕೆ ಹೆಚ್ಚಿಸುವುದು.
3. ಫಲಾನುಭವಿಗಳು ಭರಿಸಬೇಕಾದ ಮೊತ್ತಕ್ಕೆ ಕೆ.ಎಸ್.ಎಫ್.ಸಿ ವತಿಯಿಂದ ಸಾಲ ನೀಡುವ ಕುರಿತು ಹಾಗೂ ಬಡ್ಡಿದರ 4% ರಿಂದ 2% ಗೆ ಇಳಿಸುವ ವಿಷಯಗಳ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಪರಿಶೀಲಿಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ)**

**23. ಗಣಿ ಮತ್ತು ಭೂ ವಿಜ್ಞಾನ ಇಲಾಖೆ :-**

2019-20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ- ಎಸ್.ಸಿ.ಎಸ್.ಪಿ-ರೂ. 1.00 ಕೋಟಿ, ಟಿ.ಎಸ್.ಪಿ- ರೂ. 1.00 ಕೋಟಿ ಒಟ್ಟು ರೂ. 2.00 ಕೋಟಿ.

ಈ ಅನುದಾನವನ್ನು ಮರಳು ಗುತ್ತಿಗೆದಾರರು ಹೊಂದಿರುವ ಮರಳು ದಾಸ್ತಾನು ಪ್ರದೇಶದಲ್ಲಿ ವೇಬ್ರಿಡ್ಜ್ ಅಳವಡಿಸಲು ಪ್ರತಿ ಘಟಕಕ್ಕೆ ರೂ.2.00 ಲಕ್ಷ ಸಹಾಯಧನ ನೀಡಲು ಇಲಾಖೆಯು ಪ್ರಸ್ತಾಪಿಸಿದ್ದು, ಈ ಕಾರ್ಯಕ್ರಮಕ್ಕೆ ಪರಿಷತ್ ಅನುಮೋದನೆ ನೀಡಿರುವುದಿಲ್ಲ. ಸದರಿ ಮೊತ್ತವನ್ನು ಆದ್ಯರ್ಪಿಸಲು ಸೂಚಿಸಲಾಯಿತು.

**(ಕ್ರಮ: ಸರ್ಕಾರದ ಕಾರ್ಯದರ್ಶಿ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ)**

**24. ನಗರಾಭಿವೃದ್ಧಿ ಇಲಾಖೆ :-**

ನಗರಾಭಿವೃದ್ಧಿ ಇಲಾಖೆಗೆ SCSP/TSP ಯಡಿಯಲ್ಲಿ ಹಂಚಿಕೆಯಾದ ಅನುದಾನ – SCSP: Rs.1061.00 crs. + TSP: Rs.403.97 crs. ಒಟ್ಟು ಮೊತ್ತ: ರೂ. 1464.97 ಕೋಟಿಗಳು

ನಗರ ಪ್ರದೇಶಗಳಲ್ಲಿ ಪ.ಜಾತಿ/ಪ.ಪಂಗಡದವರಿಗೆ ಮನೆಗಳ ನಿರ್ಮಾಣಕ್ಕಾಗಿ ಹೆಚ್ಚಿನ ಅನುದಾನ ಬೇಕಾಗಿರುವುದರಿಂದ ಈ ಕೆಳಕಂಡ ಕಾರ್ಯಕ್ರಮಗಳಿಗೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿಯಲ್ಲಿ ನಗರಾಭಿವೃದ್ಧಿ ಇಲಾಖೆಗೆ ನೀಡಿದ ಅನುದಾನವನ್ನು ವಸತಿ ಕಾರ್ಯಕ್ರಮಕ್ಕೆ ಉಪಯೋಗಿಸಲು ನೋಡಲ್ ಏಜೆನ್ಸಿ ಶಿಫಾರಸ್ಸು ಮಾಡಿರುತ್ತದೆ.

1. ಬಳಕೆ ಆಗದ ಅನುದಾನ ಲೆಕ್ಕಶೀರ್ಷಿಕೆ 2217-05-001-1-15 ರಡಿ ಒದಗಿಸಿರುವ ರೂ.31.53 ಕೋಟಿ.
2. ನಗರೋತ್ಥಾನದಡಿ ನಾಲ್ಕನೇ ಹಂತದಲ್ಲಿ ನೀಡಿರುವ ಅನುದಾನ.
3. ಬಿ.ಬಿ.ಎಂ.ಪಿ ಮತ್ತು ಮಹಾನಗರ ಪಾಲಿಕೆಗಳಿಗೆ ಲೆಕ್ಕಶೀರ್ಷಿಕೆ 3604-00-191-2--- ರಡಿ ನೀಡಿರುವ ಅನುದಾನ.
4. ಸಿ.ಎಂ.ಸಿ/ಟಿ.ಎಂ.ಸಿ ಗಳಿಗೆ ಲೆಕ್ಕಶೀರ್ಷಿಕೆ 3604-00-192/193-2--- ರಡಿ ನೀಡಿರುವ ಅನುದಾನದಲ್ಲಿ 60% ಮನೆಗಳಿಗೆ ವಿನಿಯೋಗಿಸುವುದು.

ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಮಾತನಾಡಿ ನಗರೋತ್ಥಾನ ಯೋಜನೆಯಡಿ 2019-20 ನೇ ಸಾಲಿನಲ್ಲಿ ನೀಡಿದ ಅನುದಾನವನ್ನು ಪ.ಜಾತಿ/ಪ.ಪಂಗಡದ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಬೇರೆ ಅನುದಾನ ಲಭ್ಯವಿಲ್ಲದಿರುವುದರಿಂದ ಮೂಲಭೂತ ಸೌಕರ್ಯಗಳಿಗೆ ವಿನಿಯೋಗಿಸಲು ಅನುಮತಿ ನೀಡುವಂತೆ ಮತ್ತು ಬಿ.ಬಿ.ಎಂ.ಪಿ/ಮಹಾನಗರ ಪಾಲಿಕೆ ಮತ್ತು ಸಿ.ಎಂ.ಸಿ/ಟಿ.ಎಂ.ಸಿ ಇವರಿಗೆ ಎಸ್.ಎಫ್.ಸಿ ಅನುದಾನ ನೀಡಲಾಗುತ್ತಿದ್ದು ಅದನ್ನು ಸಹ ಮೂಲಭೂತ ಸೌಕರ್ಯಗಳಿಗೆ ಬಳಸಲಾಗುತ್ತದೆ ಎಂದು ತಿಳಿಸಿದರು. ಈಗಾಗಲೇ ಒಪ್ಪಿರುವಂತೆ ಬಳಕೆ ಆಗದ ಅನುದಾನ

ಲೆಕ್ಕಶೀರ್ಷಿಕೆ 2217-05-001-1-15 ರಡಿ ಒದಗಿಸಿರುವ ರೂ.31.53 ಕೋಟಿಗಳನ್ನು ಮನೆಗಳ ನಿರ್ಮಾಣಕ್ಕೆ ನೀಡಲು ಅಂಗೀಕರಿಸಲಾಯಿತು.

ಮಾನ್ಯ ಉಪಮುಖ್ಯಮಂತ್ರಿಗಳು ಮಾತನಾಡಿ ನಗರ ಪ್ರದೇಶಗಳಲ್ಲಿ ಮನೆಗಳ ನಿರ್ಮಾಣ ಅವಶ್ಯವಾಗಿದ್ದು ಸದರಿ ಯೋಜನೆಗೆ ಆದ್ಯತೆ ನೀಡಿ ಅನುದಾನ ಒದಗಿಸಬೇಕಾಗಿದೆ. ಆದ್ದರಿಂದ ನಗರ ಸ್ಥಳೀಯ ಸಂಸ್ಥೆಗಳಿಗೆ ನೀಡಿರುವ ಅನುದಾನದಲ್ಲಿ ಕನಿಷ್ಠ 50% ಅನುದಾನವನ್ನು ಆಯಾ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಪ.ಜಾತಿ/ಪ.ಪಂಗಡದ ವಸತಿ ರಹಿತರಿಗೆ ವಸತಿ ನಿರ್ಮಾಣಕ್ಕಾಗಿ ನೀಡುವುದು ಸೂಕ್ತವೆಂದು ತಿಳಿಸಿದರು.

ನಗರಾಭಿವೃದ್ಧಿ ಇಲಾಖೆಯಲ್ಲಿ ಫೆರಿಫೆರಲ್ ರಿಂಗ್ ರಸ್ತೆಗೆ ರೂ.170.00 ಕೋಟಿಗಳನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯಡಿ ಒದಗಿಸಿರುವುದು ಸೂಕ್ತವಲ್ಲವೆಂದು ಮತ್ತು ಅದನ್ನು ಆದ್ಯರ್ಪಣೆ ಮಾಡಲು ನೋಡಲ್ ಏಜೆನ್ಸಿಯಿಂದ ಶಿಫಾರಸ್ಸು ಮಾಡಲಾಗಿದ್ದು ಇದನ್ನು ಆದ್ಯರ್ಪಣೆ ಮಾಡಲು ರಾಜ್ಯ ಪರಿಷತ್ತಿನ ಅನುಮೋದನೆ ಕೋರಲಾಗಿದೆಯೆಂದು ಮಾನ್ಯ ಸಮಾಜ ಕಲ್ಯಾಣ ಸಚಿವರು ತಿಳಿಸಿದರು.

ಮಾನ್ಯ ಸದಸ್ಯರಾದ ಡಾ: ಕೆ.ಅನ್ನದಾನಿ ರವರು ಮಾತನಾಡಿ ಪೌರಕಾರ್ಮಿಕರಿಗೆ ಮನೆಗಳನ್ನು ನಿರ್ಮಿಸಿಕೊಳ್ಳಲು ಸಹಾಯಧನ ಒದಗಿಸಬೇಕೆಂದು ಒತ್ತಾಯಿಸಿದರು. ಖಾಯಂ ಪೌರ ಕಾರ್ಮಿಕರಿಗೆ ಮನೆಗಳ ನಿರ್ಮಾಣಕ್ಕಾಗಿ ರೂ. 6.00 ಲಕ್ಷ ಸಹಾಯಧನ ನೀಡಲಾಗುತ್ತದೆ ಎಂದು ಇಲಾಖಾ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು.

ಬಿ.ಬಿ.ಎಂ.ಪಿ ಗೆ ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಕಾರ್ಯಕ್ರಮಕ್ಕೆ ಹಿಂದಿನ ವರ್ಷದಲ್ಲಿ ನೀಡಿದ ರೂ.573.00 ಕೋಟಿಗಳನ್ನು ಪ.ಜಾತಿ / ಪ.ಪಂಗಡದವರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಈಗಾಗಲೇ ಸರ್ಕಾರದ ಸಚಿವ ಸಂಪುಟ ಅನುಮೋದನೆ ಪಡೆದು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಪ್ರಸಕ್ತ ಸಾಲಿನಲ್ಲಿ ಒದಗಿಸಿದ ಅನುದಾನವನ್ನು ರಾಜ್ಯ ಪರಿಷತ್ ತೀರ್ಮಾನದಂತೆ ಬಳಸಿಕೊಳ್ಳಲಾಗುವುದು ಎಂದು ಬಿ.ಬಿ.ಎಂ.ಪಿ ಆಯುಕ್ತರು ತಿಳಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಬಳಕೆ ಆಗದ ಅನುದಾನ ಲೆಕ್ಕಶೀರ್ಷಿಕೆ 2217-05-001-1-15 ರಡಿ ಒದಗಿಸಿರುವ ರೂ.31.53 ಕೋಟಿ ಅನುದಾನವನ್ನು ಮನೆಗಳ ನಿರ್ಮಾಣಕ್ಕೆ ವಿನಿಯೋಗಿಸಲು ಕೊಳಚೆ ಪ್ರದೇಶ ಅಭಿವೃದ್ಧಿ ಮಂಡಳಿಗೆ ನೀಡುವುದು.
2. ನಗರ ಪ್ರದೇಶಗಳಲ್ಲಿ ಮನೆಗಳ ನಿರ್ಮಾಣಕ್ಕಾಗಿ ನಗರ ಸ್ಥಳೀಯ ಸಂಸ್ಥೆಗಳಿಗೆ ನೀಡಿರುವ ಅನುದಾನದಲ್ಲಿ ಕನಿಷ್ಠ 50% ಅನುದಾನವನ್ನು ಆಯಾ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಪ.ಜಾತಿ/ಪ.ಪಂಗಡದ ವಸತಿ ರಹಿತರಿಗೆ ವಸತಿ ನಿರ್ಮಾಣಕ್ಕಾಗಿ ವಿನಿಯೋಗಿಸುವುದು(ರಾಜೀವ್ ವಸತಿ ನಿಗಮದ ಮೂಲಕ).
3. ಉಳಿದ 50% ಅನುದಾನವನ್ನು ಪ.ಜಾತಿ/ಪ.ಪಂಗಡದವರು ಹೆಚ್ಚಿಗೆ ಇರುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳಿಗೆ ಉಪಯೋಗಿಸುವುದು.
4. ಬಿ ಬಿ ಎಂ ಪಿಗೆ ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಕಾರ್ಯಕ್ರಮಕ್ಕೆ ಒದಗಿಸಲಾದ ರೂ.578.00 ಕೋಟಿಗಳಲ್ಲಿ ರೂ.100.00 ಕೋಟಿ ವಸತಿ ನಿರ್ಮಾಣಕ್ಕಾಗಿ, ರೂ.100.00 ಕೋಟಿ ಮೂಲಭೂತ ಸೌಕರ್ಯಕ್ಕಾಗಿ ನೀಡಿ ಉಳಿದ ರೂ.378.00 ಕೋಟಿ ಡೀಮ್ಡ್ ವೆಚ್ಚ ಎಂದು ಪರಿಗಣಿಸುವುದು.

5. ಫೆರಿಫರಲ್ ರಿಂಗ್ ರಸ್ತೆ ನಿರ್ಮಾಣವು ಪ.ಜಾತಿ /ಪ.ಪಂಗಡದ ಜನರಿಗೆ ನೇರವಾಗಿ ಪ್ರಯೋಜನವಾಗದೇ ಇರುವ ಕಾರಣ ಈ ಯೋಜನೆಯಡಿ ಒದಗಿಸಿರುವ ರೂ.170.00 ಕೋಟಿಗಳನ್ನು ಆದ್ಯರ್ಪಣೆ ಮಾಡುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ.)

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ)**

**25. ಲೋಕೋಪಯೋಗಿ ಇಲಾಖೆ :-**

ಲೋಕೋಪಯೋಗಿ ಇಲಾಖೆಗೆ SCSP/TSP ಯಡಿಯಲ್ಲಿ ಹಂಚಿಕೆಯಾದ ಅನುದಾನ – SCSP : Rs.1303.61 crs. + TSP : Rs.566.00 crs. ಒಟ್ಟು ಮೊತ್ತ: ರೂ.1869.61 ಕೋಟಿಗಳು

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯಡಿ ಲೋಕೋಪಯೋಗಿ ಇಲಾಖೆಯ ಕಾರ್ಯಕ್ರಮ ಗಳನ್ನು ಪರಿಶೀಲಿಸಿ ನೋಡಲ್ ಏಜೆನ್ಸಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತದೆ.

1. ಎಲಿವೇಟೆಡ್ ಕಾರಿಡಾರ್‌ಗೆ ರೂ.250.00 ಕೋಟಿಗಳನ್ನು ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯಡಿ ಒದಗಿಸಿರುವುದು ಸೂಕ್ತವಲ್ಲವೆಂದು ಮತ್ತು ಅದನ್ನು ಆದ್ಯರ್ಪಣೆ ಮಾಡಲು
2. ವೆಚ್ಚವಾಗದೇ ಇರುವ ರೂ.62.61 ಕೋಟಿ ಅನುದಾನವನ್ನು ಕ್ರೈಸ್ ವಸತಿ ಶಾಲೆಗಳಿಗೆ ಸಂಪರ್ಕ ರಸ್ತೆ ಮತ್ತು ಆಂತರಿಕ ರಸ್ತೆಗಳನ್ನು ನಿರ್ಮಿಸಲು ಉಪಯೋಗಿಸುವುದು.
3. ಜಿಲ್ಲಾ ಹಾಗೂ ಇತರ ರಸ್ತೆಗಳ ನಿರ್ವಹಣೆ/ದುರಸ್ತಿಗಾಗಿ ಒದಗಿಸಿರುವ ರೂ.100.00 ಕೋಟಿ ಅನುದಾನವನ್ನು ಸಾಮಾನ್ಯ ರಸ್ತೆ ದುರಸ್ತಿಗೆ ಬದಲು ಸದರಿ ಮೊತ್ತವನ್ನು ಪ.ಜಾತಿ/ಪ.ಪಂಗಡದ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಉಪಯೋಗಿಸಲು.

ನೋಡಲ್ ಏಜೆನ್ಸಿ ಶಿಫಾರಸ್ಸುಗಳ ಬಗ್ಗೆ ಚರ್ಚಿಸಿ ಸದರಿ ಶಿಫಾರಸ್ಸುಗಳಿಗೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು. (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ.)

**(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ)**

**26. ಭಾರೀ ನೀರಾವರಿ ಇಲಾಖೆ :-**

ಭಾರಿ ನೀರಾವರಿ ಇಲಾಖೆಗೆ SCSP/TSP ಯಡಿಯಲ್ಲಿ ಹಂಚಿಕೆಯಾದ ಅನುದಾನ – SCSP : Rs.1469.65 crs. + TSP : Rs.919.40 crs. ಒಟ್ಟು ಮೊತ್ತ : ರೂ.2389.05 ಕೋಟಿಗಳು

ಮಾನ್ಯ ಉಪ ಮುಖ್ಯಮಂತ್ರಿಗಳು, ಭಾರಿ ನೀರಾವರಿ ಇಲಾಖೆಯ ಕಾಮಗಾರಿಗಳು ಬೃಹತ್ ಪ್ರಮಾಣದಲ್ಲಿದ್ದು ಎಲ್ಲಾ ಜನರಿಗೆ ಅನುಕೂಲವಾಗುವುದರಿಂದ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ರಡಿ ಪ.ಜಾತಿ /ಪ.ಪಂಗಡದ ರೈತರ ಅನುಪಾತಕ್ಕೆ ಅನುಗುಣವಾಗಿ ಅನುದಾನ ಹಂಚಿಕೆ ಮಾಡುವುದು ಸೂಕ್ತವೆಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ಮಾತನಾಡಿ ಹಿಂದಿನ ವರ್ಷದಲ್ಲಿ ರೂ.500.00 ಕೋಟಿ ವೆಚ್ಚದಲ್ಲಿ ವಸತಿ ಶಾಲೆಗಳ ಕಟ್ಟಡ ನಿರ್ಮಾಣ ಕೈಗೆತ್ತಿಕೊಂಡಿರುವ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ, ಪ್ರಸಕ್ತ ಸಾಲಿನಲ್ಲಿ ಸಹ ರೂ.500.00 ಕೋಟಿಗಳನ್ನು ವಸತಿ ಶಾಲೆಗಳ ಕಟ್ಟಡ ನಿರ್ಮಾಣಕ್ಕೆ ಕಾಯ್ದಿರಿಸಲು ಕೋರಿದರು. ಈ ಅನುದಾನವನ್ನು ಭಾರೀ ನೀರಾವರಿ ಇಲಾಖೆಯ

ಅಚ್ಚುಕಟ್ಟು ಪ್ರದೇಶಗಳಲ್ಲಿ ಬರುವ ವಸತಿ ಶಾಲೆಗಳ ಕಟ್ಟಡಕ್ಕಾಗಿ ಮಾತ್ತ ವಿನಿಯೋಗಿಸಲಾಗುವುದು ಮತ್ತು ಸದರಿ ಕಟ್ಟಡಗಳಿಗೆ ಬೇಕಾಗುವ ನಿವೇಶನಗಳನ್ನು ಸಮಾಜ ಕಲ್ಯಾಣ ಇಲಾಖೆಯಿಂದಲೇ ಒದಗಿಸಲಾಗುವುದೆಂದು ತಿಳಿಸಿದರು.

ಭಾರೀ ನೀರಾವರಿ ಇಲಾಖೆ ಪ್ರಧಾನ ಕಾರ್ಯದರ್ಶಿಗಳು ಮಾತನಾಡಿ ಹಿಂದಿನ ವರ್ಷದ ಕಾರ್ಯಕ್ರಮಗಳಂತೆ ಪ್ರಸಕ್ತ ಸಾಲಿನಲ್ಲಿ ರಾಜ್ಯ ಪರಿಷತ್ತಿನ ತೀರ್ಮಾನದಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದೆಂದು ಹೇಳಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1 ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು.
2 ಪ್ರಸಕ್ತ ಸಾಲಿನಲ್ಲಿ ಸಹ ರೂ.500.00 ಕೋಟಿಗಳನ್ನು ವಸತಿ ಶಾಲೆಗಳ ಕಟ್ಟಡ ನಿರ್ಮಾಣಕ್ಕೆ ಕಾಯ್ದಿರಿಸುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ.)

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಭಾರೀ ನೀರಾವರಿ ಇಲಾಖೆ)**

**27. ಸಣ್ಣ ನೀರಾವರಿ ಇಲಾಖೆ :–**

ಸಣ್ಣ ನೀರಾವರಿ ಇಲಾಖೆಗೆ SCSP/TSP ಯಡಿಯಲ್ಲಿ ಹಂಚಿಕೆಯಾದ ಅನುದಾನ – SCSP : Rs.253.06 crs. + TSP : Rs.115.23 crs. ಒಟ್ಟು ಮೊತ್ತ : ರೂ.368.29 ಕೋಟಿಗಳು

ಹಿಂದಿನ ವರ್ಷದಲ್ಲಿ ವೆಚ್ಚವಾಗದೆ ಇರುವ ಅನುದಾನವನ್ನು ಪೂರ್ಣವಾಗಿ ಖರ್ಚುಮಾಡದೆ ಇರುವ ಬಗ್ಗೆ ಪ್ರಸ್ತಾಪಿಸಲಾಯಿತು. ಸಣ್ಣ ನೀರಾವರಿ ಇಲಾಖೆಯ ಕಾರ್ಯದರ್ಶಿಗಳು ಈ ಬಗ್ಗೆ ವಿವರಿಸಿ ಟಿ.ಎಸ್.ಪಿ ಅಡಿಯಲ್ಲಿ ಫಲಾನುಭವಿಗಳ ಆಯ್ಕೆಯಲ್ಲಿ ವಿಳಂಬವಾಗಿರುವುದರಿಂದ ಒದಗಿಸಿದ ಅನುದಾನವನ್ನು ಪೂರ್ಣವಾಗಿ ಖರ್ಚು ಮಾಡಲು ಸಾಧ್ಯವಾಗಿರುವುದಿಲ್ಲ ಎಂದು ತಿಳಿಸಿದರು.

ವೆಚ್ಚವಾಗದೆ ಇರುವ ಅನುದಾನವನ್ನು ಅದೇ ವರ್ಷದಲ್ಲಿ ವೆಚ್ಚ ಮಾಡಬೇಕೆಂದು ಮತ್ತು ವೆಚ್ಚವಾಗದೆ ಇದ್ದಲ್ಲಿ ವ್ಯಪಗತವಾಗುತ್ತದೆ ಎಂದು ತಿಳಿಸುತ್ತಾ ಎಲ್ಲಾ ಇಲಾಖೆಗಳು ಈ ಬಗ್ಗೆ ಆದ್ಯತೆ ಮೇಲೆ ಸದರಿ ಅನುದಾನವನ್ನು ಆಯಾ ವರ್ಷದಲ್ಲಿ ಪೂರ್ಣವಾಗಿ ಉಪಯೋಗಿಸಿಕೊಳ್ಳಲು ವಿಶೇಷ ಗಮನ ಹರಿಸುವಂತೆ ಮಾನ್ಯ ಸಮಾಜ ಕಲ್ಯಾಣ ಸಚಿವರು ಸೂಚಿಸಿದರು.

ಸಣ್ಣ ನೀರಾವರಿ ಇಲಾಖೆಯಿಂದ ಕೊಳವೆ ಬಾವಿಗಳನ್ನು ಸಹ ಕೈಗೆತ್ತಿಕೊಳ್ಳಲು ಮಾನ್ಯ ಸದಸ್ಯರಾದ ಶ್ರೀ. ಆರ್. ಧರ್ಮಸೇನ ಇವರು ಸಲಹೆ ನೀಡಿದರು ಮತ್ತು ಇತರ ಸದಸ್ಯರು ಅದಕ್ಕೆ ಸಹಮತ ವ್ಯಕ್ತಪಡಿಸಿದರು.

ಸಣ್ಣ ನೀರಾವರಿ ಇಲಾಖೆಯಿಂದ ಕೊರೆದ ಕೊಳವೆ ಬಾವಿಗಳಿಗೆ ಇಂಧನ ಇಲಾಖೆಯಿಂದ ವಿದ್ಯುತ್ ಸಂಪರ್ಕ ಕಲ್ಪಿಸಲು ಸಂಪೂರ್ಣ ವೆಚ್ಚವನ್ನು ಪಾವತಿಸಲು ಕೋರಲಾಗುತ್ತಿದ್ದು ಯಾವುದೇ ವಿನಾಯಿತಿ ನೀಡದೇ ಇರುವುದರಿಂದ ಪ್ರತಿ ಕೊಳವೆ ಬಾವಿ ಘಟಕ ವೆಚ್ಚ ಸುಮಾರು ರೂ.6.00 ರಿಂದ ರೂ.7.00 ಲಕ್ಷಗಳಾಗುತ್ತಿದ್ದು ಗಂಗಕಲ್ಯಾಣ ಯೋಜನೆಯಡಿ ನಿಗದಿ ಪಡಿಸಿದ ಘಟಕ ವೆಚ್ಚಕ್ಕಿಂತ ಹೆಚ್ಚಾಗಿರುತ್ತದೆ. ಕಾರಣ ಸಣ್ಣ ನೀರಾವರಿ ಇಲಾಖೆಯಿಂದ ಕೊರೆದ

ಕೊಳವೆ ಬಾವಿಗಳಿಗೆ ಸಹ ಗಂಗಕಲ್ಯಾಣ ಯೋಜನೆ ಮಾದರಿಯಲ್ಲಿ ರಿಯಾಯಿತಿ ನೀಡಬೇಕೆಂದು ಸಣ್ಣ ನೀರಾವರಿ ಇಲಾಖೆ ಕಾರ್ಯದರ್ಶಿಗಳು ಕೋರಿದರು.

ಈ ಬಗ್ಗೆ ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿಗಳು ಪರಿಶೀಲಿಸಿ ಎಸ್ಕಾಂಗಳಿಗೆ ಸೂಕ್ತ ನಿರ್ದೇಶನ ನೀಡಲು ಮಾನ್ಯ ಉಪಮುಖ್ಯಮಂತ್ರಿಗಳು ಸೂಚಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು

1. ಮುಂದುವರೆದ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವುದು.
2. ಕ್ರೈಸ್ ವಸತಿ ಶಾಲೆಗಳಲ್ಲಿ ನೀರಿನ ಸಂಗ್ರಹಣೆ ತೊಟ್ಟಿ ನಿರ್ಮಿಸಿ ಮಳೆ ನೀರು ಕೊಯ್ಲು ವ್ಯವಸ್ಥೆ ಮಾಡುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ.)

**(ಕ್ರಮ: ಸರ್ಕಾರದ ಕಾರ್ಯದರ್ಶಿ, ಸಣ್ಣ ನೀರಾವರಿ ಇಲಾಖೆ)**

## 28. ವೈದ್ಯಕೀಯ ಶಿಕ್ಷಣ ಇಲಾಖೆ :-

ವೈದ್ಯಕೀಯ ಶಿಕ್ಷಣ ಇಲಾಖೆಗೆ SCSP/TSP ಯಡಿಯಲ್ಲಿ ಹಂಚಿಕೆಯಾದ ಅನುದಾನ – SCSP: Rs.36.42 crs. + TSP : Rs.13.36 crs. ಒಟ್ಟು ಮೊತ್ತ : ರೂ.49.78 ಕೋಟಿಗಳು

ಮಾನ್ಯ ಸದಸ್ಯರಾದ ಡಾ:ಕೆ.ಅನ್ನದಾನಿ ಇವರು ಪ.ಜಾತಿ/ಪ.ಪಂಗಡದ ಬಡ ರೋಗಿಗಳಿಗೆ ಸೂಕ್ತ ಚಿಕಿತ್ಸೆಯನ್ನು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಒದಗಿಸಲು ಕಡ್ಡಾಯಗೊಳಿಸಬೇಕೆಂದು ತಿಳಿಸಿದರು. ಇದಕ್ಕೆ ಹೆಚ್ಚುವರಿ ಅನುದಾನ ಅವಶ್ಯಕತೆ ಇದ್ದಲ್ಲಿ ಒದಗಿಸಲು ಸಹ ಕ್ರಮ ಕೈಗೊಳ್ಳುವಂತೆ ಆರ್ಥಿಕ ಇಲಾಖೆಯನ್ನು ಕೋರಿದರು.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಮತ್ತು ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಪ.ಜಾತಿ./ಪ,ಪಂಗಡ ಬಿ.ಪಿ.ಎಲ್ ಕುಟುಂಬಗಳಿಗೆ ಉಚಿತವಾಗಿ ಚಿಕಿತ್ಸೆ ನೀಡಲು ಕ್ರಿಯಾ ಯೋಜನೆಗಳಲ್ಲಿ ಅನುದಾನ ಒದಗಿಸಲಾಗುತ್ತಿದೆ ಎಂಬ ಬಗ್ಗೆ ಸಭೆಯ ಅವಗಾಹನೆಗೆ ತರಲಾಯಿತು.

ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಮತ್ತು ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ನೀಡುವ ಬಗ್ಗೆ ಆಯಾ ಆಸ್ಪತ್ರೆಗಳ ನಿರ್ದೇಶಕರಿಗೆ ಸರ್ಕಾರದಿಂದ ನಿರ್ದೇಶನ ನೀಡಲಾಗುವುದೆಂದು ತಿಳಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಗಿನಂತೆ ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು

1. ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಮತ್ತು ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಪ.ಜಾತಿ./ಪ,ಪಂಗಡ ಬಿ.ಪಿ.ಎಲ್ ಕುಟುಂಬಗಳಿಗೆ ಉಚಿತವಾಗಿ ಚಿಕಿತ್ಸೆ ನೀಡಲು ಕ್ರಮ ವಹಿಸುವುದು. ಈ ಬಗ್ಗೆ ಸದರಿ ಆಸ್ಪತ್ರೆಗಳಲ್ಲಿ ಸೂಕ್ತ ಅಂಕಿಅಂಶಗಳನ್ನು ನಿರ್ವಹಿಸುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ.)

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ)**

**29. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ :-**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ SCSP/TSP ಯಡಿಯಲ್ಲಿ ಹಂಚಿಕೆಯಾದ ಅನುದಾನ – SCSP : Rs.671.29 crs. + TSP : Rs.290.97 crs. ಒಟ್ಟು ಮೊತ್ತ : ರೂ.962.26 ಕೋಟಿಗಳು

ವೈದ್ಯಕೀಯ ಶಿಕ್ಷಣ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿದಂತೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಮತ್ತು ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಮತ್ತು ಇತರೆ ಸರ್ಕಾರಿ ಆಸ್ಪತ್ರೆಗಳಲ್ಲಿ ಪ.ಜಾತಿ ಮತ್ತು ಪ.ಪಂಗಡ ದವರಿಗೆ ಉಚಿತ ಚಿಕಿತ್ಸೆ ಮತ್ತು ಔಷಧಗಳನ್ನು ನೀಡುವ ಬಗ್ಗೆ ಸಂಬಂಧಿಸಿದ ಆಸ್ಪತ್ರೆಗಳಿಗೆ ಸೂಕ್ತ ನಿರ್ದೇಶನ ನೀಡಲು ರಾಜ್ಯಪರಿಷತ್ತಿನಿಂದ ಸೂಚಿಸಲಾಗಿದೆ. ಅದರಂತೆ ಕ್ರಮ ವಹಿಸುವುದು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಿಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ.)

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ,ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ)**

**30. ಕಾರ್ಮಿಕ ಇಲಾಖೆ:-**

ಕಾರ್ಮಿಕ ಇಲಾಖೆಗೆ SCSP/TSP ಯಡಿಯಲ್ಲಿ ಹಂಚಿಕೆಯಾದ ಅನುದಾನ – SCSP : Rs.3.35 crs. + TSP : Rs.1.95 crs. ಒಟ್ಟು ಮೊತ್ತ : ರೂ.5.30 ಕೋಟಿಗಳು

ಜಾರಿಯಲ್ಲಿರುವ ಆಶಾದೀಪ ಕಾರ್ಯಕ್ರಮದೊಂದಿಗೆ ಈ ಕೆಳಕಂಡ 2 ಹೊಸ ಕಾರ್ಯ ಕ್ರಮಗಳನ್ನು ಪ್ರಸ್ತಾಪಿಸಲಾಗಿದೆ.

Normal (ಅವಧಿ 1 ವರ್ಷ) and Comprehensive (ಅವಧಿ 2 ವರ್ಷ) Apprentice training - ತರಬೇತಿ ಪಡೆಯುವವರಿಗೆ ಮಾಹೆಯಾನ ರೂ.3000/- ಶಿಷ್ಯವೇತನ ನೀಡಲು ಮತ್ತು ತರಬೇತಿ ಪಡೆದವರನ್ನು ಖಾಯಂ ನೇಮಕಾತಿ ಮಾಡಿಕೊಂಡಲ್ಲಿ ಮಾಲೀಕರಿಗೆ ಮಾಹೆಯಾನ ರೂ.3000/- ಪ್ರೋತ್ಸಾಹಧನ ನೀಡಲು (ಅವಧಿ 2 ವರ್ಷ)

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಕಂಡಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಆಶಾದೀಪ ಯೋಜನೆಯಡಿ ಖಾಸಗಿ ಸಂಸ್ಥೆಗಳಲ್ಲಿ ಪ.ಜಾತಿ/ಪ.ಪಂಗಡದ ಅಭ್ಯರ್ಥಿಗಳನ್ನು ನೇಮಿಸಿಕೊಂಡಲ್ಲಿ ಅವರ ಇ.ಎಸ್.ಐ ಮತ್ತು ಇ.ಪಿ.ಎಫ್ (ಅವಧಿ 2 ವರ್ಷ) ವಂತಿಗೆಯನ್ನು ಮಾಲೀಕರಿಗೆ ಮರುಪಾವತಿಸುವುದು (ಪ್ರತಿ ಅಭ್ಯರ್ಥಿಗೆ ಮಾಸಿಕ ರೂ..2000/- ರಿಂದ ರೂ.3000/-)
2. Normal (ಅವಧಿ 1 ವರ್ಷ) and Comprehensive (ಅವಧಿ 2 ವರ್ಷ) Apprentice training - ತರಬೇತಿ ಪಡೆಯುವವರಿಗೆ ಮಾಹೆಯಾನ ರೂ.3000/- ಶಿಷ್ಯವೇತನ
3. Apprentice ತರಬೇತಿ ಪಡೆದವರನ್ನು ಖಾಯಂ ನೇಮಕಾತಿ ಮಾಡಿಕೊಂಡಲ್ಲಿ ಮಾಲೀಕರಿಗೆ ಮಾಹೆಯಾನ ರೂ.3000/- ಪ್ರೋತ್ಸಾಹಧನ (ಅವಧಿ 2 ವರ್ಷ)
4. ಬಾಲ ಕಾರ್ಮಿಕರ ಪುನರ್ವಸತಿ ಕಾರ್ಯಕ್ರಮ

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ.)

**(ಕ್ರಮ: ಸರ್ಕಾರದ ಕಾರ್ಯದರ್ಶಿ,ಕಾರ್ಮಿಕ ಇಲಾಖೆ)**

**31. ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗ ಮತ್ತು ತರಬೇತಿ ಇಲಾಖೆ :-**

ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗ ಮತ್ತು ತರಬೇತಿ ಇಲಾಖೆಗೆ SCSP/TSP ಯಡಿಯಲ್ಲಿ ಹಂಚಿಕೆಯಾದ ಅನುದಾನ – SCSP : Rs.105.37 crs. + TSP : Rs.43.95 crs. ಒಟ್ಟು ಮೊತ್ತ : ರೂ. 149.32 ಕೋಟಿಗಳು

ಮಾನ್ಯ ಉಪ ಮುಖ್ಯಮಂತ್ರಿಗಳು ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವು ಸರ್ಕಾರದ ಮಹತ್ವಾಕಾಂಕ್ಷಿ (Flagship) ಯೋಜನೆಯಾಗಿದ್ದು, ಹಿಂದಿನ ಆರ್ಥಿಕ ವರ್ಷಗಳಲ್ಲಿ ಐದು ಲಕ್ಷ ಅಭ್ಯರ್ಥಿಗಳಿಗೆ ತರಬೇತಿ ನೀಡಲು ಗುರಿ ನಿಗದಿಪಡಿಸಲಾಗಿತ್ತು. ತರಬೇತಿ ಪಡೆದವರಿಗೆ ಉದ್ಯೋಗ ನೀಡುವ ಷರತ್ತಿನೊಂದಿಗೆ ಕಾರ್ಯಕ್ರಮ ಅನುಷ್ಠಾನ ಮಾಡಬೇಕಾಗಿದ್ದು, ಇದುವರೆಗೆ ಎಷ್ಟು ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗಿದೆ ಹಾಗೂ ಉದ್ಯೋಗ ಪಡೆದವರ ವಿವರವನ್ನು ಸಲ್ಲಿಸುವಂತೆ ಇಲಾಖೆಯ ಕಾರ್ಯದರ್ಶಿಗಳಿಗೆ ಸೂಚಿಸಿದರು. ಉದ್ಯೋಗ ಮೇಳ ಕಾರ್ಯಕ್ರಮಗಳಲ್ಲಿ ಸಹ ವಿದ್ಯಾರ್ಹತೆಗೆ ಅನುಗುಣವಾಗಿ ಉದ್ಯೋಗಗಳನ್ನು ದೊರಕಿಸಿ ಕೊಡದೆ ಸಣ್ಣಪುಟ್ಟ ಉದ್ಯೋಗಗಳನ್ನು ನೀಡುತ್ತಿರುವುದು ಗಮನಿಸಲಾಗಿದೆ. ಆದ್ದರಿಂದ ಉದ್ಯೋಗ ಮೇಳವನ್ನು ಪರಿಣಾಮಕಾರಿಯಾಗಿ ಆಯೋಜಿಸಿ ವಿದ್ಯಾರ್ಹತೆಗೆ ತಕ್ಕಂತೆ ಖಾಯಂ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಕ್ರಮಕೈಗೊಳ್ಳುವಂತೆ ಸೂಚಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ ಇಲಾಖೆ)**

**32. ಇಂಧನ ಇಲಾಖೆ :-**

2019-20ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.1596.97 crs. + TSP : Rs.586.30 crs. ಒಟ್ಟು ಮೊತ್ತ : ರೂ.2183.27 ಕೋಟಿಗಳು

ಮಾನ್ಯ ಉಪ ಮುಖ್ಯಮಂತ್ರಿಗಳು ಮಾತನಾಡಿ ಎಲ್ಲಾ ರೈತರಿಗೆ 10 ಹೆಚ್‌ಪಿ ಕೃಷಿ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಅಂತಹ ಸಂದರ್ಭದಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನ ನೀಡಿದ್ದು ಸೂಕ್ತವಲ್ಲ. ಆದರೂ 10 ಹೆಚ್.ಪಿ ವರೆಗಿನ ಕೃಷಿ ಪಂಪ್‌ಸೆಟ್‌ಗಳು ಹೊಂದಿರುವ ಪ.ಜಾತಿ ಪ.ಪಂಗಡದ ರೈತರ ಅಂಕಿ ಅಂಶಗಳನ್ನು ನೀಡಿದ್ದಲ್ಲಿ ಅದರ ಅನುಪಾತಕ್ಕೆ ಅನುಗುಣವಾಗಿ ಅನುದಾನ ಹಂಚಿಕೆ ಮಾಡಬಹುದು. ಆದ್ದರಿಂದ ತಕ್ಷಣ ಇಲಾಖೆಯವರು ಕ್ರಮವಹಿಸಿ ಅಂಕಿಅಂಶಗಳನ್ನು ಒದಗಿಸಲು ಸೂಚಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಕಂಡಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಇಂಧನ ಇಲಾಖೆಯ ಕ್ರಿಯಾಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಆದರೆ 10 ಹೆಚ್.ಪಿ ಒಳಗಿನ ಐ.ಪಿ ಸೆಟ್ ಹೊಂದಿರುವ ಪ.ಜಾತಿ/ಪ.ಪಂಗಡದ ಫಲಾನುಭವಿಗಳ ಅಂಕಿ ಅಂಶಗಳನ್ನು ಒದಗಿಸುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ)**

**33. ಕನ್ನಡ ಮತ್ತು ಸಂಸ್ಕೃತಿ ಇಲಾಖೆ :–**

2019–20 ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.20.42 crs. + TSP : Rs.8.73crs. ಒಟ್ಟು ಮೊತ್ತ : ರೂ.29.15 ಕೋಟಿಗಳು

ಮಾನ್ಯ ಸದಸ್ಯರಾದ ಶ್ರೀ.ಹೆಚ್.ಕೆ.ಕುಮಾರಸ್ವಾಮಿ ಇವರು ಪರಿಶಿಷ್ಟ ಜಾತಿ/ಪಂಗಡದ ಜನರಲ್ಲಿ ಬಹಳಷ್ಟು ಕಲಾವಿದರು ಇರುವುದರಿಂದ ಈ ಇಲಾಖೆಗೆ ಹೆಚ್ಚಿನ ಅನುದಾನ ಒದಗಿಸುವಂತೆ ಕೋರಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ)**

**34. ಯೋಜನಾ ಇಲಾಖೆ :–**

2019–20ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.462.60crs. + TSP : Rs.188.11 crs. ಒಟ್ಟು ಮೊತ್ತ : ರೂ.650.71 ಕೋಟಿಗಳು

ಮಾನ್ಯ ಸದಸ್ಯರಾದ ಶ್ರೀ ಹೆಚ್.ಕೆ. ಕುಮಾರಸ್ವಾಮಿ ಇವರು ಮಾತನಾಡಿ ಶಾಸಕರ ಪ್ರದೇಶಾಭಿವದ್ಧಿ ಅನುದಾನದಡಿ ಯೋಜನಾ ಇಲಾಖೆಗೆ ನಿಗದಿ ಪಡಿಸಿದ ಅನುದಾನವನ್ನು ಪೂರ್ಣವಾಗಿ ಬಿಡುಗಡೆ ಮಾಡಿರುವುದಿಲ್ಲವೆಂದು ತಿಳಸಿದರು. ಪ್ರಧಾನ ಕಾರ್ಯದರ್ಶಿಗಳು ಯೋಜನಾ ಇಲಾಖೆ ಇವರು ಬಿಡುಗಡೆಯಾದ ಅನುದಾನವನ್ನು ಖರ್ಚು ಮಾಡದೇ ಇರುವ ಕಾರಣ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಕಾರ್ಯಕ್ರಮಗಳ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ)**

**35. ಕಾನೂನು ಇಲಾಖೆ :–**

2019–20ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs. 0.45 crs. + TSP : Rs.0.20 crs. ಒಟ್ಟು ಮೊತ್ತ : ರೂ.0.65 ಕೋಟಿಗಳು

ಸರ್ಕಾರದ ಕಾರ್ಯದರ್ಶಿ ಕಾನೂನು ಇಲಾಖೆ ಇವರು ಕಾನೂನು ವಿಶ್ವವಿದ್ಯಾಲಯದ ಅಧೀನದಲ್ಲಿರುವ ಕಾನೂನು ಕಾಲೇಜುಗಳಲ್ಲಿ ಪ.ಜಾತಿ/ಪ.ಪಂಗಡದ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚು ಇರುವ ಕಾರಣ ಲ್ಯಾಪ್‌ಟಾಪ್ ಮತ್ತು ಕಾನೂನು ಪುಸ್ತಕಗಳ ವಿತರಣೆಗೆ ಹೆಚ್ಚುವರಿ ಅನುದಾನ ಒದಗಿಸುವಂತೆ ಕೋರಿದರು. ಈ ಬಗ್ಗೆ ಪರಿಶೀಲಿಸಲಾಗುವುದೆಂದು ತಿಳಸಲಾಯಿತು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಮುಂದುವರೆದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು (ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ)

**(ಕ್ರಮ: ಸರ್ಕಾರದ ಕಾರ್ಯದರ್ಶಿ, ಕಾನೂನು ಇಲಾಖೆ)**

**36. ಆರ್ಥಿಕ ಇಲಾಖೆ :-**

2019-20ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs. 700.00 crs. + TSP : Rs.325.00 crs. ಒಟ್ಟು ಮೊತ್ತ : ರೂ. 1025.00 ಕೋಟಿಗಳು

ಸಾಲಮನ್ನಾ ಯೋಜನೆಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರ ಅಂಕಿ ಅಂಶಗಳ ಅನುಗುಣವಾಗಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನನ್ನು ಬಳಸಿಕೊಂಡು, ಒಂದು ವೇಳೆ ಉಳಿಕೆಯಾದಲ್ಲಿ ಆ ಮೊತ್ತವನ್ನು ಸಮಾಜ ಕಲ್ಯಾಣ ಇಲಾಖೆಗೆ ಮರುಹಂಚಿಕೆ ಮಾಡುವುದಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರು ತಿಳಿಸಿದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಈ ಕೆಳಕಂಡಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ರಾಜ್ಯ ಪರಿಷತ್ತಿನಿಂದ ಅನುಮೋದನೆ ನೀಡಲಾಯಿತು.

1. ಇಲಾಖೆಯ ಕ್ರಿಯಾಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ.
2. ಸಾಲಮನ್ನಾ ಸೌಲಭ್ಯ ಪಡೆದ ಪರಿಶಿಷ್ಟ ಜಾತಿ/ಪಂಗಡದ ರೈತರ ಅಂಕಿ ಅಂಶಗಳ ಮಾಹಿತಿಯನ್ನು ಒದಗಿಸುವುದು ಹಾಗೂ ಅನುದಾನ ಉಳಿಕೆಯಾದಲ್ಲಿ ಸದರಿ ಮೊತ್ತವನ್ನು ಸಮಾಜ ಕಲ್ಯಾಣ ಇಲಾಖೆ ಮರುಹಂಚಿಕೆ ಮಾಡುವುದು.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ)**

**37. ಸಮಾಜ ಕಲ್ಯಾಣ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ :-**

2019-20ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನ – SCSP : Rs.4649.82 crs. + TSP : Rs.1389.18 crs. ಒಟ್ಟು ಮೊತ್ತ : ರೂ. 6039.00 ಕೋಟಿಗಳು.

ಇಲಾಖೆಯ ಎಲ್ಲಾ ಕಾರ್ಯಕ್ರಮಗಳಿಗೆ ತಗಲುವ ವೆಚ್ಚವನ್ನು ಎಸ್.ಸಿ.ಎಸ್.ಪಿ/ ಟಿ.ಎಸ್.ಪಿಯಡಿಯಲ್ಲಿಯೇ ಭರಿಸಲಾಗುತ್ತದೆ ಎಂದು ತಿಳಿಸುತ್ತಾ ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ ಸಂಕ್ಷಿಪ್ತವಾಗಿ ತಿಳಿಸಿ ವಿವರಗಳನ್ನು ಕ್ರಿಯಾ ಯೋಜನೆಯಲ್ಲಿ ನೀಡಲಾಗಿದೆ ಎಂದು ತಿಳಿಸಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ಮಾತನಾಡಿ ಸಮಾಜ ಕಲ್ಯಾಣ ಇಲಾಖೆಯಿಂದ ಪ.ಜಾತಿ/ಪ.ಪಂಗಡದ ಆರ್ಥಿಕ ಅಭಿವೃದ್ಧಿಗಾಗಿ ಐರಾವತ, ಸಮೃದ್ಧಿ, ಉನ್ನತಿ, ಪ್ರೇರಣಾ ಮುಂತಾದ ನೂತನ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ ಎಂದು ತಿಳಿಸಿದರು.

ಮಾನ್ಯ ಉಪಮುಖ್ಯಮಂತ್ರಿಗಳು, ಸಮಾಜ ಕಲ್ಯಾಣ ಇಲಾಖೆಯ ನೂತನ ಕಾರ್ಯಕ್ರಮಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ, ಬಾಡಿಗೆ ಕಟ್ಟಡದಲ್ಲಿರುವ ಎಲ್ಲಾ ವಿದ್ಯಾರ್ಥಿನಿಲಯಗಳು ಹಾಗೂ ಕ್ರೈಸ್ ವಸತಿ ಶಾಲೆಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದರು.

ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳು ಮತ್ತು ವಸತಿ ಶಾಲೆಗಳಿಗೆ ನಿವೇಶನ ಪಡೆಯಲು ಕ್ರಮ ವಹಿಸಿದ್ದು, ಆದ್ಯತೆ ಮೇರೆಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ ಎಂದು ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರು ಸಭೆಯ ಅವಗಾಹನೆಗೆ ತಂದರು.

ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಸಮಾಜ ಕಲ್ಯಾಣ ಇಲಾಖೆಯ ಪ್ರಸ್ತಾವನೆಗಳಿಗೆ ರಾಜ್ಯ ಪರಿಷತ್ತಿನ ಅನುಮೋದನೆ ನೀಡಲಾಗಿದೆ.

(ಕ್ರಿಯಾ ಯೋಜನೆ ವಿವರಗಳನ್ನು ಲಗತ್ತಿಸಿದೆ).

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ)**

**ಇತರೆ ವಿಷಯಗಳು** :

1) ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿಯಲ್ಲಿ ಕರ್ನಾಟಕ ಅನುಸೂಚಿತ ಜಾತಿ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ ನಿಯಮಗಳಂತೆ (ನಿಯಮ ೨(3)) ಆಯ್ಕೆ ಸಮಿತಿಗಳು ಪಾರದರ್ಶಕವಾಗಿ ವೈಯಕ್ತಿಕ ಫಲಾನುಭವಿಗಳನ್ನು ಆಯ್ಕೆ ಮಾಡುವುದು.

**(ಕ್ರಮ:- ಎಲ್ಲಾ ಇಲಾಖೆಗಳು)**

2) ರಾಜ್ಯ ಪರಿಷತ್ತಿನ ತೀರ್ಮಾನಗಳಂತೆ ಅವಶ್ಯಕತೆ ಇದ್ದಲ್ಲಿ ಸಂಬಂಧ ಪಟ್ಟ ಇಲಾಖೆಗಳು ತಕ್ಷಣ ಸರ್ಕಾರಿ ಆದೇಶಗಳನ್ನು ಹೊರಡಿಸುವುದು.

**(ಕ್ರಮ:- ಸಂಬಂಧ ಪಟ್ಟ ಎಲ್ಲಾ ಇಲಾಖೆಗಳು)**

3) ಎಸ್‌ಸಿಎಸ್‌ಪಿ/ಟಿಎಸ್‌ಪಿ ಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಶೈಕ್ಷಣಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಆದ್ಯತೆ ನೀಡಬೇಕಾಗಿದ್ದು, ಅನುದಾನ ಹಂಚಿಕೆಯ ಬಗ್ಗೆ ಪುನರ್ ಪರಿಶೀಲಿಸಲು ಸಚಿವ ಸಂಪುಟದ ಉಪಸಮಿತಿ ರಚಿಸಿ ಆ ಮೂಲಕ ಎಸ್.ಸಿ.ಎಸ್.ಪಿ/ಟಿಎಸ್.ಪಿ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಟಾನಗೊಳಿಸುವ ಕುರಿತು ಕ್ರಮವಹಿಸುವಂತೆ ತೀರ್ಮಾನಿಸಲಾಯಿತು.

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ)**

4) ಎಲ್ಲಾ ಇಲಾಖೆಗಳ ಬಗ್ಗೆ ಮೇಲ್ಕಂಡಂತೆ ಚರ್ಚಿಸಿದಂತೆ ಎಸ್.ಸಿ.ಎಸ್.ಪಿ/ಟಿಎಸ್.ಪಿ ಅಧಿನಿಯಮ ದೇಶಕ್ಕೆ ಮಾದರಿಯಾಗಿದ್ದು, ಸಾಕಷ್ಟು ಅನುದಾನವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ವಿನಿಯೋಗಿಸಲಾಗುತ್ತಿದೆ. ಆದರೆ ಈ ಅಧಿನಿಯಮ ಜಾರಿಗೆ ಬಂದ ನಂತರ ವಿವಿಧ ಇಲಾಖೆಗಳು ಅನುಷ್ಠಾನ ಮಾಡಿದ ಕಾರ್ಯಕ್ರಮಗಳಡಿ ಸೌಲಭ್ಯ ಪಡೆದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳ ಬಗ್ಗೆ ನಿಖರ ಮಾಹಿತಿ ಇಲ್ಲದೇ ಸಭೆಗೆ ಹಾಜರಾಗಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ ಇಲಾಖಾ ಅಧಿಕಾರಿಗಳು ಎಲ್ಲಾ ಮಾಹಿತಿಯೊಂದಿಗೆ ಸಭೆಗೆ ಹಾಜರಾಗುವಂತೆ ಮಾನ್ಯ ಉಪ ಮುಖ್ಯಮಂತ್ರಿಗಳು ಸೂಚಿಸಿದರು.

ಅಲ್ಲದೇ ಎಸ್.ಸಿ.ಎಸ್.ಪಿ/ಟಿಎಸ್.ಪಿ ಕಾಯ್ದೆ ಜಾರಿಗೆ ಬಂದ ಬಳಿಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಜೀವನ ಮಟ್ಟದಲ್ಲಿ ಸುಧಾರಣೆಯಾಗಿದೆಯೇ? ಮತ್ತು ಈ ಕಾರ್ಯಕ್ರಮಗಳು

ಎಷ್ಟರ ಮಟ್ಟಿಗೆ ಜನರಿಗೆ ತಲುಪಿವೆ ಎಂಬ ಬಗ್ಗೆ ಮೌಲ್ಯಮಾಪನ ಮಾಡಿ ವರದಿ ಪಡೆಯಲು ಸೂಚಿಸಿದರು.

5) ಸನ್ಮಾನ್ಯ ಮುಖ್ಯಮಂತ್ರಿಗಳು ಸಭೆಯನ್ನು ಉದ್ದೇಶಿಸಿ ಮಾತನಾಡಿ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆಯು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ಜಾರಿಗೆ ಬಂದಿದ್ದು, ಈ ಕಾಯ್ದೆ ಜಾರಿಗೆ ಬಂದ ನಂತರ ಕಳೆದ 4 ವರ್ಷಗಳಲ್ಲಿ ಈ ವರ್ಗದ ಜನರ ಅಭಿವೃದ್ಧಿಗಾಗಿ ಗಣನೀಯ ಪ್ರಮಾಣದಲ್ಲಿ ಅನುದಾನ ಒದಗಿಸಿದ್ದು, ಹಂಚಿಕೆ ಮಾಡಿರುವ ಅನುದಾನವು ಜನರ ಬದುಕಿಗೆ ಆಸರೆಯಾಗುವ ನಿಟ್ಟಿನಲ್ಲಿ ಸದ್ವಿನಿಯೋಗ ಆಗುತ್ತಿರುವ ಬಗ್ಗೆ ಚಿಂತನೆ ನಡೆಸಬೇಕಾಗಿದೆ ಎಂದು ತಿಳಿಸಿದರು ಮತ್ತು ಇದರ ಯಶಸ್ಸಿನ ಬಗ್ಗೆ ಪರಿಣಾಮಕಾರಿಯಾದ ಅಧ್ಯಯನ ಮಾಡುವುದು ಸೂಕ್ತವಾಗಿರುತ್ತದೆ. ಈಗಾಗಲೇ ಉಪ ಮುಖ್ಯಮಂತ್ರಿಗಳು ನೀಡಿರುವ ಸಲಹೆಯಂತೆ ಉಪ ಸಮಿತಿಗಳನ್ನು ರಚಿಸಿ, ವಿವಿಧ ಇಲಾಖೆಗಳಿಗೆ ಅನುದಾನ ಹಂಚಿಕೆಯ ಬಗ್ಗೆ ಸ್ಪಷ್ಟ ರೂಪುರೇಷೆಗಳನ್ನು ಸಿದ್ಧಪಡಿಸುವಂತೆ ಸೂಚಿಸಿದರು.

ನಿಗದಿತ ಅನುದಾನ ಬಳಕೆ ಮಾಡುವಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಅಧಿನಿಯಮ ಮತ್ತು ನಿಯಮಗಳ ಅನುಸಾರ ಕಠಿಣ ಕ್ರಮ ಜರುಗಿಸುವುದು ಅನಿವಾರ್ಯ. ಆದ್ದರಿಂದ ಎಲ್ಲಾ ಅಧಿಕಾರಿಗಳು ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡತಕ್ಕದ್ದೆಂದು ಸ್ಪಷ್ಟ ಸೂಚನೆ ನೀಡಿದರು. ಎಸ್.ಸಿ.ಎಸ್.ಪಿ/ಟಿಎಸ್.ಪಿ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ರೂ.30445.00 ಕೋಟಿಗಳನ್ನು ಒದಗಿಸಲಾಗಿದ್ದು, ಅದನ್ನು ಶೇ 100 ರಷ್ಟು ವೆಚ್ಚ ಮಾಡಲೇಬೇಕೆಂದು ಮತ್ತು ಅನುಮೋದನೆಯಾದ ಕ್ರಿಯಾಯೋಜನೆಯನ್ವಯ ಎಲ್ಲಾ ಕಾರ್ಯಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಹಾಗೂ ಯಾವುದೇ ಅನುದಾನ ವ್ಯಪಗತವಾಗದಂತೆ ಮುಂಜಾಗ್ರತೆ ವಹಿಸಿ ಕಾರ್ಯ ನಿರ್ವಹಿಸುವಂತೆ ಎಲ್ಲಾ ಇಲಾಖಾ ಅಧಿಕಾರಿಗಳಿಗೆ ಸೂಚಿಸಿದರು.

ಎಸ್.ಸಿ.ಎಸ್.ಪಿ/ಟಿಎಸ್.ಪಿ ಕಾರ್ಯಕ್ರಮಗಳು ಸಮರ್ಪಕವಾಗಿ ಅನುಷ್ಠಾನ ವಾಗುತ್ತಿರುವ ಬಗ್ಗೆ ನೋಡಲ್ ಏಜೆನ್ಸಿ ಅಧ್ಯಕ್ಷರಾದ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಪ್ರತಿ 3 ತಿಂಗಳಿಗೊಮ್ಮೆ ಪ್ರಗತಿ ಪರಿಶೀಲನೆ ಸಭೆಗಳನ್ನು ನಡೆಸಲು ಮತ್ತು ಇಲಾಖೆಗಳಲ್ಲಿ ಕೆಲವು ಕಾರ್ಯಕ್ರಮಗಳಲ್ಲಿ ಉಳಿಕೆಯಾಗುವ ಮೊತ್ತವನ್ನು ಮರುಹಂಚಿಕೆ ಮಾಡುವ ಬಗ್ಗೆ ಕ್ರಮವಹಿಸುವಂತೆ ತಿಳಿಸಿದರು.

ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಹಿ/-

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯ ಮಂತ್ರಿಗಳು ಹಾಗೂ ಅಧ್ಯಕ್ಷರು,
ರಾಜ್ಯ ಅನುಸೂಚಿತ ಜಾತಿಗಳು/
ಅನುಸೂಚಿತ ಪಂಗಡಗಳ
ಅಭಿವೃದ್ಧಿ ಪರಿಷತ್ತು.